ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೬೨

# ಪಟ್ಟಿ – ೦೭

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಗುರುವಾರ, ದಿನಾಂಕ : ೦೪ನೇ ಮಾರ್ಚ್, ೨೦೨೧

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು.

೩. ಸಣ್ಣ ನೀರಾವರಿ ಸಚಿವರು.

೪. ಜಲಸಂಪನ್ಮೂಲ ಸಚಿವರು

೫. ಅಬಕಾರಿ ಸಚಿವರು.

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನಾ ಸಚಿವರು

# ಬೀದರ್ ಜಿಲ್ಲೆಯಲ್ಲಿ ಅಬಕಾರಿ ಇಲಾಖೆಯಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೪೯೯ (೬೯೫) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಪ್ರತಿಯೊಂದು ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಜಿಲ್ಲೆಯಲ್ಲಿ ಮದ್ಯ ಮಾರಾಟ ಲೈಸನ್ಸ್ ಇರುವ ಅಂಗಡಿಗಳಲ್ಲೂ ಅಕ್ರಮವಾಗಿ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಜಿಲ್ಲೆಯಲ್ಲಿ ಸಿಎಲ್೨, ಸಿಎಲ್೪, ಸಿಎಲ್೭, ಸಿಎಲ್೯, ಸಿಎಲ್೧೧ಸಿ ಮದ್ಯ ಮಾರಾಟದ ಅಂಗಡಿಗಳು ಎಷ್ಟು ಇವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಜಿಲ್ಲೆಯಲ್ಲಿ ಮದ್ಯ ಮಾರಾಟದ ಅಂಗಡಿಗಳಿಗೆ ವಿಧಿಸಿರುವ ದಂಡ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಉ) ಜಿಲ್ಲೆಯಲ್ಲಿ ಕಳ್ಳ ಭಟ್ಟಿ ಸರಾಯಿ ಘಟಕಗಳು ಇವೆಯೇ; ಇದ್ದಲ್ಲಿ, ಕಡಿವಾಡಿ ಹಾಕಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಹಾಗೂ ದಾಖಲಾಗಿರುವ ಪ್ರಕರಣಗಳೆಷ್ಟು ? (ವಿವರವಾದ ಮಾಹಿತಿ ನೀಡುವುದು

## ಬೀದರ್ ಜಿಲ್ಲೆಯಲ್ಲಿ ಕ್ರೀಡಾ ಶಾಲೆ/ವಸತಿ ನಿಲಯ ಹಾಗೂ ಕ್ರೀಡಾಂಗಣ ನಿರ್ಮಾಣದ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೦ (೯೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮–೧೯ ರಿಂದ ೨೦೨೦–೨೧ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಲ್ಲಿ ಕ್ರೀಡಾ ಶಾಲೆ/ವಸತಿ ನಿಲಯಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು; (ವಿವರವಾದ ಮಾಹಿತಿ ನೀಡುವುದು)

(ಆ) ೨೦೧೮–೧೯ ರಿಂದ ೨೦೨೦–೨೧ ನೇ ಸಾಲಿನಲ್ಲಿ ಕ್ರೀಡಾ ಸಾಮಾಗ್ರಿಗಳನ್ನು ಖರೀದಿಸಲು ಮತ್ತು ಆಟದ ಮೈದಾನ ಅಭಿವೃದ್ಧಿಗೊಳಿಸಲು ಬಂದಿರುವ ಅನುದಾನ ಎಷ್ಟು; (ವಿವರವಾದ ಮಾಹಿತಿ ಒದಗಿಸುವುದು)

(ಇ) ಬೀದರ್ ಜಿಲ್ಲೆಯಲ್ಲಿರುವ ಗ್ರಾಮೀಣಾ ಕ್ರೀಡಾ ಕೇಂದ್ರಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಗ್ರಾಮೀಣ ಪ್ರದೇಶದಲ್ಲಿರುವ ವಿದ್ಯಾರ್ಥಿ ಮತ್ತು ವಿದ್ಯಾರ್ಥಿನಿಯರಿಗೆ ಹಾಗೂ ಕ್ರೀಡಾ ಕೂಟ ಸಂಘಟನೆಗಳಿಗೆ ವಿತರಿಸಲಾಗಿರುವ ಕ್ರೀಡಾ ಸಾಮಾಗ್ರಿಗಳು ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ೨೦೧೮ ರಿಂದ ೨೦೨೧ ರವರೆಗೆ ಸೋಲಾರ್ ಘಟಕಗಳ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೧ (೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿರುವ ಸೋಲಾರ್ ವಿದ್ಯುತ್ ಘಟಕಗಳ ಸಂಖ್ಯೆ ಎಷ್ಟು; ಅವುಗಳಿಂದ ತಿಂಗಳು ಉತ್ಪಾದನಾ ಪ್ರಮಾಣವೆಷ್ಟು; (ಘಟಕವಾರು ಮಾಹಿತಿ ನೀಡುವುದು)

(ಆ) ಪ್ರತಿ ಘಟಕದಿಂದ ಎಷ್ಟು ವಿದ್ಯುತ್ ಖರೀದಿಸಲಾಗುತ್ತಿದೆ; ಅದಕ್ಕಾಗಿ ಎಷ್ಟು ಹಣ ಪಾವತಿಸಲಾಗುತ್ತಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ಘಟಕಗಳಿಂದ ಯಾವ ದರದಲ್ಲಿ ವಿದ್ಯುತ್ ಖರೀದಿ ಮಾಡಲಾಗುತ್ತಿದೆ ಹಾಗೂ ಗ್ರಾಹಕರಿಗೆ ಯಾವ ದರದಲ್ಲಿ ನೀಡಲಾಗುತ್ತಿದೆ ? (ವಿವರವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಗೆ ೨೦೧೮-೧೯ ರಿಂದ ೨೦೨೦-೨೧ನೇ ಸಾಲಿನಲ್ಲಿ ಸಣ್ಣ ನೀರಾವರಿ ಇಲಾಖೆಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೨ (೯೭೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಸಣ್ಣ ನೀರಾವರಿ ಇಲಾಖೆಗೆ ಬಿಡುಗಡೆಯಾದ ಅನುದಾನ ಎಷ್ಟು ಮತ್ತು ಯಾವ ಯಾವ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು ಎಸ್.ಸಿ.ಪಿ/ಟಿ.ಎಸ್.ಪಿ. ಯೋಜನೆಯೊಂದಿಗೆ)

(ಆ) ಕರ್ನಾಟಕ ಕೆರೆ ಸಂರಕ್ಷಣಾ ಪ್ರಾಧಿಕಾರದ ವತಿಯಿಂದ ಎಷ್ಟು ಕೆರೆಗಳ ಹೂಳು ತೆಗೆಯುವ ಕಾಮಗಾರಿ ಕೈಗೊಳ್ಳಲಾಗಿದೆ ? (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ಬೀದರ್ ಜಿಲ್ಲೆಯ ಮಾಂಜ್ರಾ ನದಿಯ ಬ್ಯಾರೇಜ್ ಕಾಮಗಾರಿಯ ಲೋಪದೋಷ ಕುರಿತು.

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦೩ (೯೮೮) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ಮಾಂಜ್ರಾ ನದಿಯ ಸರಣಿ ಬ್ಯಾರೇಜ್‌ಗಳಲ್ಲಿನ ಗೇಟ್ ಸಮಸ್ಯೆಯಾಗಿ ನೀರು ನಿಲ್ಲದಿರುವುದರ ಬಗ್ಗೆ ತನಿಖೆಗೆ ಹೈಕೋರ್ಟ್ ಆದೇಶಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತನಿಖೆ ಯಾವ ಹಂತದಲ್ಲಿದೆ; (ಮುಗಿದಿದ್ದಲ್ಲಿ, ಮಾಹಿತಿ ಒದಗಿಸುವುದು)

(ಆ) ಹಾಗಿದ್ದಲ್ಲಿ, ನೂರಾರು ಕೋಟಿ ರೂಪಾಯಿಗಳು ವೆಚ್ಚ ಮಾಡಿ ನಿರ್ಮಾಣ ಮಾಡಲಾದ ಯೋಜನೆಯಲ್ಲಿ ಅಕ್ರಮ ಮತ್ತು ಲೋಪದೋಷಗಳನ್ನು ಎಸಗಿದ್ದ ಅಧಿಕಾರಿಗಳ ಮೇಲೆ ಯಾವ ಕ್ರಮಕೈಗೊಳ್ಳಲಾಗಿದೆ;

(ಇ) ನಾಲ್ಕು ಬ್ಯಾರೇಜ್‌ಗಳಿಗೆ ಖರ್ಚು ಮಾಡಿರುವ ಹಣ ಎಷ್ಟು ಮತ್ತು ಯಾವ ವರ್ಷದಲ್ಲಿ ಬ್ಯಾರೇಜ್‌ಗಳನ್ನು ನಿರ್ಮಾಣ ಮಾಡಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ಈ ಸರಣಿ ಬ್ಯಾರೇಜ್‌ಗಳ ನಿರ್ಮಾಣದಿಂದ ಒಟ್ಟು ಎಷ್ಟು ಎಕರೆ ಪ್ರದೇಶಕ್ಕೆ ನೀರಾವರಿ ಸೌಲಭ್ಯವನ್ನು ಕಲ್ಪಿಸಲಾಗಿದೆ ?

## ಆರ್ಥಿಕ ಮಿತವ್ಯಯ ಆದೇಶವನ್ನು ಹಿಂಪಡೆಯುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೫೦೪ (೬೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಉನ್ನತ ಶಿಕ್ಷಣ ಇಲಾಖೆಯ ಅನುದಾನಿತ ಪ್ರಾಥಮಿಕ. ಪ್ರೌಢ ಶಾಲೆ, ಪದವಿ ಪೂರ್ವ ಹಾಗೂ ಪದವಿ ಕಾಲೇಜುಗಳಲ್ಲಿ ಖಾಲಿ ಹುದ್ದೆ ಭರ್ತಿ ಮಾಡುವ ಕುರಿತಂತೆ ಆರ್ಥಿಕ ಇಲಾಖೆಯು ಆರ್ಥಿಕ ಮಿತವ್ಯಯದ ಆದೇಶ ಹೊರಡಿಸಿ ಹುದ್ದೆ ಭರ್ತಿ ಮಾಡುವುದನ್ನು ತಡೆಹಿಡಿಯಲಾಗಿದೆಯೇ;

(ಆ) ಆರ್ಥಿಕ ಇಲಾಖೆಯು ಹೊರಡಿಸಿರುವ ಆರ್ಥಿಕ ಮಿತವ್ಯಯದ ಆದೇಶವನ್ನು ಹಿಂಪಡೆಯುವಂತೆ ಅಥವಾ ಸಡಿಲಗೊಳಿಸುವಂತೆ ಈಗಾಗಲೇ ಪ್ರಸ್ತಾವನೆಯನ್ನು ಶಿಕ್ಷಣ ಇಲಾಖೆಯು ಮಂಡಿಸಿದೆಯೇ; ಮಂಡಿಸಿದ್ದಲ್ಲಿ, ಪ್ರಸ್ತಾವನೆಯು ಯಾವ ಹಂತದಲ್ಲಿದೆ;

(ಇ) ಈ ಆದೇಶವನ್ನು ಸಡಿಲಗೊಳಿಸಿ ಖಾಲಿ ಹುದ್ದೆಗಳ ಭರ್ತಿಗೆ ಹಾಗೂ ವೇತನದ ಹಂತಕ್ಕೆ ಬಂದ ಪ್ರಸ್ತಾವನೆಗಳನ್ನು ಅನುಮೋದಿಸಿ ವೇತನ ಬಿಡುಗಡೆಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ;

(ಈ) ಆರ್ಥಿಕ ಇಲಾಖೆಯ ಆರ್ಥಿಕ ಮಿತವ್ಯಯದ ಆದೇಶ (ಸುತ್ತೋಲೆ ಸಂಖ್ಯೆ: ಆಇ:೧೫೭:ವೆಚ್ಚ-೮/೨೦೨೦) ವನ್ನು ಹಿಂಪಡೆಯಲಾಗುವುದು ಯಾವಾಗ ?

## ಮೀಸಲಾತಿ ಅಭಿಪ್ರಾಯ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :-**

೫೦೫ (೬೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯ ಭಾಷಾ ಅಲ್ಪ ಸಂಖ್ಯಾತ ಶಾಲೆಗಳಲ್ಲಿ ರೋಷ್ಟರ್ ನಿಯಮಗಳ ವಿನಾಯಿತಿ

ಬಗ್ಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಅಭಿಪ್ರಾಯ ಕೋರಿ ಬಂದಿರುವ ಪ್ರಸ್ತಾವನೆಯ (ಇಡಿ:೩೩ಎಸ್ಎಂಸಿ೨೦೧೨) ಕುರಿತು ಸಿಆಸುಇ ಇಲಾಖೆಯ ಸ್ಪಷ್ಟ ಅಭಿಪ್ರಾಯ ಏನು ;

(ಆ) ಭಾಷಾ ಅಲ್ಪಸಂಖ್ಯಾತ ಶಾಲಾ ಕಾಲೇಜುಗಳಲ್ಲಿ ಪಾಲಿಸಬಹುದಾದ ಅಥವಾ ಪ್ರಸ್ತುತ ಇರುವ ನಿಯಮಾವಳಿಗಳೇನು? (ಸಂಪೂರ್ಣ ವಿವರ ನೀಡುವುದು)

**ಕೆ.ಪಿ.ಟಿ.ಸಿ.ಎಲ್ ಇಲಾಖೆಯ ಆರ್ & ಡಿ ವಿಭಾಗ ಕುರಿತು**

**ಶ್ರೀಮತಿ ಭಾರತಿ ಶೆಟ್ಟಿ (ನಾಮನಿರ್ದೇಶನ ಹೊಂದಿದವರು) :–**

೫೦೬ (೬೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಟಿ.ಸಿ.ಎಲ್. ಇಲಾಖೆಯು Research and Development ವಿಭಾಗ ಹೊಂದಿದೆಯೇ;

(ಆ) ಹಾಗಿದ್ದಲ್ಲಿ, ಇದು ಯಾವಾಗಿಂದ ಅಸ್ತಿತ್ವದಲ್ಲಿದೆ; ಇಲ್ಲಿ ಎಷ್ಟು ಸಿಬ್ಬಂದಿ ಹಾಗೂ ತಜ್ಞರು ಕಾರ್ಯ ನಿರ್ವಹಿಸುತ್ತಿದ್ದಾರೆ; (ವಿವರ ಒದಗಿಸುವುದು)

(ಇ) ಸದರಿ ವಿಭಾಗವು ಇಲ್ಲಿಯವರೆಗೆ ಕೈಗೊಂಡಿರುವ ಸಂಶೋಧನೆಗಳ ಬಗ್ಗೆ ಮಾಹಿತಿ ಒದಗಿಸುವುದು;

(ಈ) ಪ್ರಸ್ತುತ ಕೈಗೊಂಡಿರುವ ಸಂಶೋಧನೆಗಳಾವುವು;

(ಉ) ಇವುಗಳಿಂದ ವಿದ್ಯುತ್ ವ್ಯವಸ್ಥೆ ಹಾಗೂ ಗ್ರಾಹಕರಿಗೆ ಆಗಿರುವ ಅನುಕೂಲಗಳೇನು;

(ಊ) ಈ ವಿಭಾಗದ ಉನ್ನತೀಕರಣಕ್ಕೆ ಸರ್ಕಾರದ ಕ್ರಮಗಳೇನು ?

## ರಾಜ್ಯದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೭ (೫೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಗ್ರೂಪ್ ಎ, ಬಿ ಮತ್ತು ಸಿ ವೃಂದದ ಹುದ್ದೆಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಖಾಲಿಯಿರುವ ಸಂಖ್ಯೆ ಎಷ್ಟು;

(ಆ) ಸದರಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಎಷ್ಟು ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳಲಾಗುವುದು? (ವಿವರ ನೀಡುವುದು)

## ಕರ್ನಾಟಕ ಲೋಕ ಸೇವಾ ಆಯೋಗದ ಕಾರ್ಯವೈಖರಿಯ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೫೦೮ (೫೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕ ಸೇವಾ ಆಯೋಗದ ಭ್ರಷ್ಟ ಮತ್ತು ಜನ ವಿರೋಧಿ ಕಾರ್ಯವೈಖರಿಯು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಅದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ರಾಜ್ಯದ ವಿವಿಧ ಜಿಲ್ಲೆಗಳಿಂದ ವಿವಿಧ ಸಮಸ್ಯೆಗಳನ್ನು ಹೊತ್ತು ಕರ್ನಾಟಕ ಲೋಕ ಸೇವಾ ಆಯೋಗ ಕಾರ್ಯಾಲಯಕ್ಕೆ ಬರುವ ಅಭ್ಯರ್ಥಿಗಳಿಗೆ/ಪದವೀಧರರಿಗೆ ಸ್ಪಂದಿಸಲು ಯಾವುದೇ ವ್ಯವಸ್ಥೆ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು;

(ಇ) ಸಾರ್ವಜನಿಕ ಕುಂದುಕೊರತೆಗಳನ್ನು ಬಗೆಹರಿಸಲು ಕರ್ನಾಟಕ ಲೋಕ ಸೇವಾ ಆಯೋಗ ವಿಫಲವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ಸರಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಿದೆಯೇ; ನಿರ್ಬಂಧಿಸಿದ್ದಲ್ಲಿ ಅದಕ್ಕೆ ಕಾರಣವೇನು;

(ಉ) ಕರ್ನಾಟಕ ಲೋಕ ಸೇವಾ ಆಯೋಗ ಕಛೇರಿ ಒಳಗಡೆ ಬಿಡದಿರಲು ಕಾರಣವಾದ ಸಮಸ್ಯೆಗಳಿಗೆ ಸಮಾದಾನ ಕಂಡುಕೊಳ್ಳುವ ವ್ಯವಸ್ಥೆ/ ವಿಧಾನವೇನು ; (ವಿವರ ನೀಡುವುದು)

(ಊ) ಕಳೆದ ಎರಡು ವರ್ಷಗಳಲ್ಲಿ ಕರ್ನಾಟಕ ಲೋಕ ಸೇವಾ ಆಯೋಗ ಕಛೇರಿಗೆ ಭೇಟಿ ನೀಡಿದ ಬಗ್ಗೆ Visitor's Dairy ಇಡಲಾಗಿದೆಯೇ; ಇಟ್ಟಿದ್ದಲ್ಲಿ ಸದರಿ ಡೈರಿಯ ದೃಢೀಕರಣ ನಕಲು ಪ್ರತಿ ನೀಡುವುದು ?

## ವಿದ್ಯುತ್ ಬಿಲ್ ಬಾಕಿ ಕುರಿತು

**ಡಾ: ಚಂದ್ರಶೇಖರ್ ಬಿ. ಪಾಟೀಲ್ (ಪದವೀಧರರ ಕ್ಷೇತ್ರ) :–**

೫೨೯ (೫೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಗೆ ಪೊಲೀಸ್ ವಸತಿ ಗೃಹಗಳಿಂದ ಬರಬೇಕಾದ ವಿದ್ಯುತ್ ಬಿಲ್ ಬಾಕಿ ಮೊತ್ತ ಎಷ್ಟು;

(ಆ) ಸದರಿ ಬಾಕಿ ಬಿಲ್ ವಸೂಲಿಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಇ) ಬಿಲ್ ಪಾವತಿಸದ ಪೊಲೀಸ್ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ? (ವಿವರ ನೀಡುವುದು)

## ಯುವ ಸಬಲೀಕರಣ ಕಾರ್ಯಕ್ರಮಗಳು

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೦ (೭೦೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಲ್ಲಿ ಯುವ ಸಬಲೀಕರಣಕ್ಕಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿ ಕೊಳ್ಳಲಾಗಿದೆ; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ;

(ಆ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ನಡೆಸಲಾಗಿರುವ ಕಾರ್ಯಕ್ರಮಗಳೆಷ್ಟು; ಕಾರ್ಯಕ್ರಮಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಯಾವ ರೀತಿ ನೀಡಲಾಗುತ್ತದೆ;

(ಇ) ಕ್ರೀಡೆಗಳಿಗೆ ಸಂಬಂಧಿಸಿದಂತೆ ಹಮ್ಮಿಕೊಂಡಿರುವ ಕಾರ್ಯಕ್ರಮಗಳು ಯಾವುವು ?

## ಸಣ್ಣ ನೀರಾವರಿ ಇಲಾಖೆಯ ಕಾರ್ಯಕ್ರಮಗಳು

**ಶ್ರೀ ಆರ್.ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೧ (೭೧೦) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ; ಅದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ;

(ಆ) ಅಂತರ್‌ಜಲ ಅಭಿವೃದ್ಧಿಗಾಗಿ ಕೈಗೊಂಡಿರುವ ಕಾರ್ಯಕ್ರಮಗಳೇನು; ಇದಕ್ಕಾಗಿ ಎಷ್ಟು ಹಣ ಖರ್ಚು ಮಾಡಲಾಗಿದೆ;

(ಇ) ಸಣ್ಣ ನೀರಾವರಿ ಇಲಾಖೆಯಲ್ಲಿ ಹೊಸದಾಗಿ ಯಾವುದಾದರೂ ಕಾರ್ಯಕ್ರಮಗಳನ್ನು ರೂಪಿಸಲಾಗಿದೆಯೇ ? (ರೂಪಿಸಿದ್ದಲ್ಲಿ, ಅದರ ವಿವರಗಳನ್ನು ನೀಡುವುದು)

## ಬೆಂಗಳೂರು ಮಹಾನಗರದಲ್ಲಿರುವ ಮೇಲ್ಸೇತುವೆ ನಿರ್ವಹಣೆ ಬಗ್ಗೆ

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೫೧೨ (೭೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ವ್ಯಾಪ್ತಿಯಲ್ಲಿ ನಗರದ ವಿವಿಧ ಭಾಗಗಳಲ್ಲಿ ನಿರ್ಮಾಣವಾಗಿರುವ ಮೇಲ್ಸೇತುವೆ ಹಾಗೂ ಕೆಳ

ಸೇತುವೆ ಒಳ ಹಾಗೂ ಹೊರಭಾಗಗಳಲ್ಲಿ ಗಿಡಗಳು ಮರವಾಗಿ ಬೆಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸೇತುವೆಗಳ ಆಯಸ್ಸು ಕಡಿಮೆ ಆಗುವುದರಿಂದ ಈ ಗಿಡಗಳನ್ನು ತೆಗೆಯಲು ವಹಿಸಲಾದ ಕ್ರಮವೇನು;

(ಆ) ಮೇಲ್ಸೇತುವೆ ಹಾಗೂ ಕೆಳ ಸೇತುವೆಗಳ ರಸ್ತೆಗಳಲ್ಲಿ ಮಳೆ ಬಂದಾಗ/ ಕೊಳಚೆ ನೀರು ಸೇರಿದಾಗ ವಾಹನ ಸವಾರರು ಓಡಾಡಲು ತೊಂದರೆ ಆಗುತ್ತಿದ್ದು, ಇವುಗಳನ್ನು ಸ್ವಚ್ಛಗೊಳಿಸಲು ಕೈಗೊಳ್ಳಲಾದ ಕ್ರಮ ಏನು?

## ಸ್ವಚ್ಛ ಬೆಂಗಳೂರು ಕುರಿತು

**ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :–**

೫೧೩ (೬೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಪ್ರತಿ ದಿವಸ ಉತ್ಪಾದನೆ ಆಗುವ ಘನತ್ಯಾಜ್ಯವನ್ನು ಪರಿಷ್ಕರಿಸಿ, ಜೈವಿಕ ಅನಿಲ ಮತ್ತು ರಸಗೊಬ್ಬರ ಉತ್ಪಾದನಾ ಘಟಕಗಳನ್ನು ಸ್ಥಾಪಿಸಲಾಗಿದ್ದು ಇವುಗಳಿಂದ ಉತ್ಪತ್ತಿಯಾಗಿರುವ ಒಟ್ಟು ಇಂಧನ ಎಷ್ಟು; ಹಾಗೂ ಉತ್ಪತ್ತಿಯಾಗಿರುವ ರಸಗೊಬ್ಬರದ ಒಟ್ಟು ಪ್ರಮಾಣ ಎಷ್ಟು;

(ಆ) ಘನತ್ಯಾಜ್ಯ ಪರಿಷ್ಕರಿಸಿ ಜೈವಿಕ ಅನಿಲ ಘಟಕದಿಂದ ಉತ್ಪತ್ತಿಯಾಗುತ್ತಿರುವ ಇಂಧನ ಹಾಗೂ ರಸಗೊಬ್ಬರ ಮಾರಾಟದಿಂದ ಪಾಲಿಕೆಗೆ ಬರುತ್ತಿರುವ ಒಟ್ಟು ಆದಾಯ ಎಷ್ಟು? (ಪೂರ್ಣ ಮಾಹಿತಿ ನೀಡುವುದು)

## ಕೆರೆಗಳಲ್ಲಿ ಹೂಳೆತ್ತುವ ಕಾಮಗಾರಿ ಕೈಗೊಳ್ಳುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೪ (೬೪೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಸಣ್ಣ ಕೆರೆಗಳ ಗ್ರಾಮವಾರು/ತಾಲ್ಲೂಕುವಾರು ಮಾಹಿತಿ ನೀಡುವುದು; (ಕೆರೆಯ ಹೆಸರು, ಗ್ರಾಮ ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಎಷ್ಟು ಕೆರೆಗಳಲ್ಲಿ ಹೂಳೆತ್ತುವ ಕಾಮಗಾರಿ ಹಾಗೂ ಇನ್ನಿತರೆ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕಾಮಗಾರಿಯ ಮೊತ್ತವೆಷ್ಟು; (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

(ಇ) ಈ ಕಾಮಗಾರಿಗಳಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಅನುದಾನವೆಷ್ಟು; ಕಾಮಗಾರಿಗಳನ್ನು ಗುತ್ತಿಗೆದಾರರ ವಿವರವನ್ನು ನೀಡುವುದು? (ಕೆರೆಯ ಹೆಸರು, ಕಾಮಗಾರಿಯ ಹೆಸರು, ಗ್ರಾಮ, ಹೋಬಳಿ, ತಾಲ್ಲೂಕಿನ ವಿವರ ನೀಡುವುದು)

## ಎತ್ತಿನಹೊಳೆ ಯೋಜನೆಗೆ ಜಮೀನು ನೀಡಿರುವ ರೈತರಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೫ (೬೪೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಯಲುಸೀಮೆ ಜಿಲ್ಲೆಗಳಿಗೆ ಕುಡಿಯುವ ನೀರನ್ನು ಒದಗಿಸುವ ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಎಷ್ಟು ಎಕರೆ ಜಮೀನನ್ನು ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; (ಜಮೀನು ಕಳೆದುಕೊಂಡಿರುವ ಸಂತ್ರಸ್ಥರ ಹೆಸರು ಮತ್ತು ಊರಿನ ವಿವರಗಳೊಂದಿಗೆ ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಎತ್ತಿನಹೊಳೆ ಯೋಜನೆಗಾಗಿ ಹಾಸನ ಜಿಲ್ಲೆಯಲ್ಲಿ ಭೂಮಿ ಕಳೆದುಕೊಂಡ ರೈತರಿಗೆ ಸರ್ಕಾರದಿಂದ ಪರಿಹಾರ ನೀಡಲು ಎಕರೆವಾರು ನಿಗಧಿಪಡಿಸಿರುವ ಬೆಲೆ ಎಷ್ಟು; ಇದಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ಮತ್ತು ಇದರಲ್ಲಿ ಪರಿಹಾರ ನೀಡಿರುವ ಮೊತ್ತವೆಷ್ಟು;

(ಇ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆದಿರುವ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು

(ಈ) ಎತ್ತಿನಹೊಳೆ ಯೋಜನೆಯಡಿ ಇದುವರೆಗೂ ಪರಿಹಾರ ಪಡೆಯದ ಭೂ ಸಂತ್ರಸ್ಥರ ಹೆಸರು, ಪರಿಹಾರದ ಮೊತ್ತ ಮತ್ತು ಊರಿನ ವಿವರಗಳನ್ನು ನೀಡುವುದು; ಇವರಿಗೆ ಪರಿಹಾರ ನೀಡಲು ವಿಳಂಬವಾಗಿರುವುದಕ್ಕೆ ಕಾರಣಗಳೇನು ?

## ರಾಜ್ಯದಲ್ಲಿ ಮದ್ಯ ಮಾರಾಟ ಮಾಡಲು ನೀಡುತ್ತಿರುವ ಪರವಾನಗಿಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೬ (೬೪೭) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಿಎಲ್‌೨, ಸಿಎಲ್‌೪, ಸಿಎಲ್‌೬ಎ, ಸಿಎಲ್‌೭, ಸಿಎಲ್‌೯, ಸಿಎಲ್‌೧೧ಸಿ, ಆರ್‌ವಿಬಿ ಮತ್ತು ಇತರೆ ಪರವಾನಗಿಗಳನ್ನು ನೀಡಲು ಸರ್ಕಾರವು ಅನುಸರಿಸುತ್ತಿರುವ ಮಾನದಂಡಗಳೇನು; (ಆದೇಶ ಸಹಿತ ಸಂಪೂರ್ಣ ವಿವರ ನೀಡುವುದು)

(ಆ) ಒಂದು ಪರವಾನಗಿ ಪಡೆದ ಉದ್ದಿಮೆದಾರರು ಅದೇ ಪರವಾನಗಿಯಡಿಯಲ್ಲಿ ಜಿಲ್ಲೆಯ ಬೇರೆ ಬೇರೆ ಜಾಗಗಳಲ್ಲಿ ಮದ್ಯದಂಗಡಿ ಮತ್ತು ಬಾರ್ ಅಂಡ್ ರೆಸ್ಟೋರೆಂಟ್ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಅವುಗಳ ವಿವರ ನೀಡುವುದು; ಇವರ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಇ) ಸರ್ಕಾರ ನಿಗದಿಪಡಿಸಿರುವ ನಿಯಮಗಳನ್ನು ಉಲ್ಲಂಘನೆ ಮಾಡಿ ಪರವಾನಗಿ ಮಂಜೂರು ಮಾಡುತ್ತಿರುವ ಪ್ರಕರಣಗಳು ಹೆಚ್ಚಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೆ; ಹಾಗಿದ್ದಲ್ಲಿ, ನಿಯಮಗಳನ್ನು ಉಲ್ಲಂಘಿಸಿರುವ ಪ್ರಕರಣಗಳೆಷ್ಟು ಹಾಗೂ ಸದರಿ ಪ್ರಕರಣಗಳ ವಿರುದ್ಧ ಸರ್ಕಾರ ಕೈಗೊಂಡ ಕ್ರಮಗಳೇನು : (ಪ್ರಕರಣವಾರು ವಿವರ ನೀಡುವುದು)

## ೬ನೇ ವೇತನ ಆಯೋಗದ ಶಿಫಾರಸ್ಸುಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೧೭ (೬೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೬ನೇ ವೇತನ ಆಯೋಗದ ೨ನೇ ಸಂಪುಟದಲ್ಲಿ ಯಾವ ವಿಷಯಗಳ ಬಗ್ಗೆ ಶಿಫಾರಸ್ಸು ಮಾಡಲಾಗಿದೆ; (ವಿವರ ನೀಡುವುದು)

(ಆ) ೨ನೇ ಸಂಪುಟವನ್ನು ಅಧ್ಯಯನ ಮಾಡಲು ರಚಿಸಿರುವ ಅಧಿಕಾರಿಗಳ ಸಮಿತಿಯು ಸಲ್ಲಿಸಿರುವ ಅಧ್ಯಯನ ವರದಿಯ ವಿವರಗಳೇನು ; ಈ ವರದಿಯ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡುವುದು;

(ಇ) ಯಾವ ಕಾಲಮಿತಿಯೊಳಗೆ ೨ನೇ ಸಂಪುಟದ ಶಿಫಾರಸ್ಸುಗಳನ್ನು ಜಾರಿಗೊಳಿಸಲಾಗುವುದು : (ಮಾಹಿತಿ ನೀಡುವುದು)

## ಬೆಂಗಳೂರು ನಗರದ ಸುತ್ತ ಫೆರಿಫೆರಲ್ ರಿಂಗ್ ರಸ್ತೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೮ (೭೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದಲ್ಲಿ ಬಹುನಿರೀಕ್ಷಿತ ಫೆರಿಫೆರಲ್ ರಿಂಗ್ ರಸ್ತೆ ನಿರ್ಮಿಸುವ ಯೋಜನೆ ಯಾವ ಹಂತದಲ್ಲಿದೆ;

(ಆ) ಇದಕ್ಕಾಗಿ ಒದಗಿಸಬೇಕೆಂದಿರುವ ಅನುದಾನದ ಮೊತ್ತವೆಷ್ಟು; ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು ?

## ಪ್ಲಾಸ್ಟಿಕ್ ಮುಕ್ತ ಬೆಂಗಳೂರು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧೯ (೭೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರವನ್ನು ಪ್ಲಾಸ್ಟಿಕ್ ಮುಕ್ತಗೊಳಿಸಲು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಆ) ಪ್ಲಾಸ್ಟಿಕ್ ಮುಕ್ತಗೊಳಿಸುವ ನಿಟ್ಟಿನಲ್ಲಿ ಸರ್ಕಾರ ವಿಫಲವಾಗಿರುವುದು ನಿಜವೇ; (ಸರ್ಕಾರದ ಗಮನಕ್ಕೆ ಬಂದಿದೆಯೇ;)

(ಇ) ಹಾಗಿದ್ದಲ್ಲಿ ಸರ್ಕಾರ ಕೈಗೊಳ್ಳಲಿರುವ ಕ್ರಮವೇನು ?

## ಕೈಗಾರಿಕೆಗಳಿಗೆ ಸಬ್ಸಿಡಿ ದರದಲ್ಲಿ ವಿದ್ಯುತ್ ಪೂರೈಕೆಯ ಬಗ್ಗೆ

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೦ (೭೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಪಿ.ಟಿ.ಸಿ.ಎಲ್ ನಿಗಮವು ಸಬ್ಸಿಡಿ ದರದಲ್ಲಿ ರಾಜ್ಯದ ಕೈಗಾರಿಕೆಗಳಿಗೆ ವಿದ್ಯುತ್ ಸರಬರಾಜು ಮಾಡುತ್ತಿದೆಯೇ;

(ಆ) ಮಾಡುತ್ತಿದ್ದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳಿಗೆ ಮತ್ತು ಬೃಹತ್ ಕೈಗಾರಿಕೆಗಳಿಗೆ ಸಬ್ಸಿಡಿ ದರ ವಿಧಿಸುತ್ತಿದೆ ;

(ಇ) ಇದರಿಂದ ರಾಜ್ಯದ ಕೈಗಾರಿಕೆಗಳಲ್ಲಿ ಉತ್ಪಾದನಾ ವೆಚ್ಚಕ್ಕೆ ಅನುಕೂಲವಾಗಿದೆಯೇ ?

## ಕ್ರೀಡಾ ತರಬೇತಿ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೧ (೭೯೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರದಲ್ಲಿ ಕ್ರೀಡಾ ತರಬೇತಿಗಾಗಿ ಇರುವ ಸ್ಥಳಗಳಾವುವು; ಯಾವ ಯಾವ ಕ್ರೀಡೆಗಳಿಗೆ ಎಲ್ಲೆಲ್ಲಿ ತರಬೇತಿಗಳನ್ನು ನೀಡಲಾಗುತ್ತಿದೆ;

(ಆ) ಕ್ರೀಡಾಪಟುಗಳನ್ನು ಉತ್ತೇಜಿಸುವ ದೃಷ್ಟಿಯಿಂದ ಮತ್ತು ಅನುಕೂಲ ಕಲ್ಪಿಸುವ ದೃಷ್ಟಿಯಿಂದ ಸಹಾಯಧನವನ್ನು ನೀಡಲಾಗುತ್ತಿದೆಯೇ;

(ಇ) ಹಾಗಿದ್ದಲ್ಲಿ, ಇದಕ್ಕಾಗಿ ಕೇಂದ್ರ ಮತ್ತು ಸರ್ಕಾರ ವ್ಯಯಿಸಿರುವ ಹಣವೆಷ್ಟು ?

## ಅಮಾನತ್ ಬ್ಯಾಂಕ್ ಅಕ್ರಮ ಹಾಗೂ ಐಎಂಎ ಹಗರಣದ ಬಗ್ಗೆ

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೨ (೭೨೩) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಮಾನತ್ ಬ್ಯಾಂಕ್ ಅಕ್ರಮದ ತನಿಖೆಯು ಯಾವ ಹಂತದಲ್ಲಿದೆ; ಮತ್ತು ಇದುವರೆಗೂ ಯಾರ್‍ಯಾರ ಮೇಲೆ ಕೇಸ್ ದಾಖಲಿಸಿ ಕ್ರಮ ಕೈಗೊಳ್ಳಲಾಗಿದೆ; (ಸಂಪೂರ್ಣ ವಿವರ ಒದಗಿಸುವುದು)

(ಆ) ಅಮಾನತ್ ಬ್ಯಾಂಕ್ ಅಕ್ರಮದಲ್ಲಿ ಈವರೆಗೂ ಒಟ್ಟಾರೆ recovery ಮಾಡಿದ ಆಸ್ತಿ/ಹಣವೆಷ್ಟು ; ಖಾತೆದಾರರಿಗೆ ಪಾವತಿ ಮಾಡಬೇಕಾದ ಮೊತ್ತ ಎಷ್ಟು ; (ಸಂಪೂರ್ಣ ಅಂಕಿ–ಅಂಶಗಳನ್ನು ಒದಗಿಸುವುದು)

(ಇ) ಅಮಾನತ್ ಬ್ಯಾಂಕ್ ಅಕ್ರಮ ತನಿಖೆಯು ನಿಧಾನಗತಿಗೆ ಕಾರಣಗಳೇನು ;

(ಈ) IMA, AMBIDANT & INJAZ ಹಗರಣದಲ್ಲಿ ಈವರೆಗೂ ಒಟ್ಟಾರೆ ಎಷ್ಟು ಹಣವನ್ನು recovery ಮಾಡಲಾಗಿದೆ; ವಂಚನೆಗೆ ಒಳಗಾದ ಠೇವಣಿದಾರರಿಗೆ ಮರು ಪಾವತಿ ಮಾಡಬೇಕಾದ ಹಣವೆಷ್ಟು ; (ಅಂಕಿ–ಅಂಶಗಳ ಸಹಿತ ಸಂಪೂರ್ಣ ಮಾಹಿತಿ ಒದಗಿಸುವುದು)

(ಉ) IMA, AMBIDANT & INJAZ ಪ್ರಕರಣದಲ್ಲಿ ಇಲ್ಲಿಯವರೆಗೆ ಯಾರ್‍ಯಾರ ಮೇಲೆ ಕ್ರಮಕೈಗೊಳ್ಳಲಾಗಿದೆ ; ಇದರಲ್ಲಿ ರಾಜಕಾರಣಿಗಳ ಹೆಸರುಗಳು ಕೇಳಿ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು ?

## ಸನ್ಮಾನ್ಯ ಮುಖ್ಯಮಂತ್ರಿಗಳ ಸಿ.ಡಿ. ಬಗ್ಗೆ ಕೇಳಿ ಬರುತ್ತಿರುವ ಆರೋಪ ಕುರಿತು

**ಶ್ರೀ ಸಿ.ಎಂ. ಇಬ್ರಾಹಿಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨೩ (೬೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮುಖ್ಯಮಂತ್ರಿಗಳ ಸಿ.ಡಿ. ಕುರಿತು ಶಾಸಕರನ್ನೊಳಗೊಂಡಂತೆ ಆರೋಪ ಮತ್ತು ಪ್ರತ್ಯಾರೋಪಗಳ ಹೇಳಿಕೆಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ತೆಗೆದುಕೊಂಡ ಕ್ರಮವೇನು;

(ಆ) ರಾಜ್ಯದ ಜನರ ಪ್ರತಿನಿಧಿಯಾಗಿ ಸರ್ಕಾರ ನಡೆಸುತ್ತಿರುವ ಸನ್ಮಾನ್ಯ ಮುಖ್ಯಮಂತ್ರಿಗಳನ್ನು ಸಿ.ಡಿ. ವಿಚಾರವಾಗಿ ಬ್ಲಾಕ್‌ಮೇಲ್ ಮಾಡುವ ನಿಟ್ಟಿನಲ್ಲಿಯೋ ಅಥವಾ ಸಾರ್ವಜನಿಕರಲ್ಲಿ ತಪ್ಪು–ಕಲ್ಪನೆ ಮೂಡುವಂತೆ ಮಾಡುವ ಹುನ್ನಾರವಿದ್ದರೆ ಸತ್ಯಾಸತ್ಯತೆಯನ್ನು ಹೊರಗೆ ತರಲು ಸರ್ಕಾರವು ತನಿಖೆಗೆ ಆದೇಶಿಸಲಿಲ್ಲವೇಕೆ;

(ಇ) ಆರೋಪ ಮಾಡಿದವರು ಸಾಕ್ಷಿ ನೀಡಿದ್ದಾರೆಯೇ; ಇಲ್ಲದಿದ್ದಲ್ಲಿ ಅವರ ಮೇಲೆ ಕಾನೂನು ರೀತ್ಯ ಕ್ರಮ ತೆಗೆದುಕೊಳ್ಳಲಾಗುವುದೇ ?

## ರಾಜ್ಯದ ಬೊಕ್ಕಸಕ್ಕೆ ವಿವಿಧ ಮೂಲಗಳಿಂದ ಬರುವ ಹಣದ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೪ (೬೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧–೨೧ ಆರ್ಥಿಕ ವರ್ಷದ ರಾಜ್ಯದ ಆಯವ್ಯಯದ ಮೊತ್ತವೆಷ್ಟು; ರಾಜಸ್ವಕ್ಕೆ ಒಟ್ಟಾರೆ ಎಲ್ಲಾ ಮೂಲಗಳಿಂದ ಕ್ರೂಢೀಕರಣಗೊಂಡ ಹಣವೆಷ್ಟು; ಕೊರತೆ ಎಷ್ಟು; (ವಿವರವಾದ ಮಾಹಿತಿ ಒದಗಿಸುವುದು)

(ಆ) ೨೦೨೦–೨೧ರ ಆರ್ಥಿಕ ವರ್ಷದಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಯಾವ ಯಾವ ಮೂಲಗಳಿಂದ ಬರಬೇಕಾದ ಹಣ ಎಷ್ಟು; ಎಷ್ಟು ಬಂದಿದೆ; ಬಾಕಿ ಇರುವ ಹಣವೆಷ್ಟು; (ವಿವರವಾಗಿ ಮೂಲ ಹಾಗೂ ಲೆಕ್ಕ ಶೀರ್ಷಿಕೆ ವಿವರಗಳೊಂದಿಗೆ ಮಾಹಿತಿ ಕೊಡುವುದು)

(ಇ) ಸರ್ಕಾರದ ಭದ್ರತಾ ಪತ್ರಗಳು ಅಂದರೇನು; ೨೦೨೦–೨೧ನೇ ಆರ್ಥಿಕ ವರ್ಷದಲ್ಲಿ ಕರ್ನಾಟಕ ಸರ್ಕಾರವು ಭಾರತೀಯ ರಿಸರ್ವ ಬ್ಯಾಂಕ್ ಮೂಲಕ ಎಷ್ಟು ಸಾವಿರ ಕೋಟಿ ಭದ್ರತಾ ಪತ್ರಗಳನ್ನು ಹರಾಜು ಮಾಡಲಾಗಿದೆ; ಇದರಿಂದ ಬಂದ ಹಣವೆಷ್ಟು; (ವಿವರವಾಗಿ ದಿನಾಂಕವಾರು ಮಾಹಿತಿ ಕೊಡುವುದು)

(ಈ) ರಾಜ್ಯದ ಅಭಿವೃದ್ಧಿ ಕಾರ್ಯಗಳಿಗೆ ಹಣ ಬಿಡುಗಡೆ ಮಾಡದಿರಲು ಕಾರಣಗಳೇನು; ಇದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಸರ್ಕಾರದಲ್ಲಿರುವ ಇಲಾಖೆ– ನಿಗಮಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೫ (೬೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಸರ್ಕಾರದಲ್ಲಿರುವ ಆಡಳಿತ ಇಲಾಖೆಗಳು ಎಷ್ಟು; ಅವು ಯಾವುವು; (ಸಚಿವಾಲಯ ಇಲಾಖೆಗಳು ಮತ್ತು ಅವುಗಳ ಅಡಿ ಬರುವ ಕ್ಷೇತ್ರ ಇಲಾಖೆವಾರು ವಿವರವಾದ ಮಾಹಿತಿ ಒದಗಿಸುವುದು)

(ಆ) ಸದರಿ ಇಲಾಖೆಗಳ ಅಧೀನದಲ್ಲಿ ಬರುವ ಸಾರ್ವಜನಿಕ ನಿಗಮಗಳು/ ಕಂಪನಿಗಳು, ಶಾಸನಬದ್ಧ ಮಂಡಳಿಗಳು ಉದ್ದಿಮೆಗಳು ಅಂಗ ಸಂಸ್ಥೆಗಳು ಮತ್ತು ಸೊಸೈಟಿಗಳು ಹಾಗೂ ಇತರೆ ಎಷ್ಟಿವೆ; ಯಾವುವು ? (ವಿವರವಾಗಿ ಇಲಾಖೆವಾರು, ಕೇಂದ್ರ ಕಚೇರಿ, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ಒಳಗೊಂಡಂತೆ ವಿವರವಾದ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಕ್ರೋಢಿಕೃತಗೊಳ್ಳುವ ತೆರಿಗೆಯ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೬ (೬೮೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತೆರಿಗೆ ಎಂದರೇನು; ಅವುಗಳಲ್ಲಿ ಎಷ್ಟು ವಿಧ; ಅವು ಯಾವುವು; ಬ್ರಿಟಿಷ್ ಕಾಲದಿಂದ ಇಲ್ಲಿಯವರೆಗೂ ತೆರಿಗೆಯ ಇತಿಹಾಸವೇನು; (ವಿವರವಾದ ಮಾಹಿತಿ ಒದಗಿಸುವುದು)

(ಆ) ತೆರಿಗೆಯ ವಿವಿಧ ಸ್ತರಗಳು ಯಾವುವು; ರಾಜ್ಯದಲ್ಲಿ ಹಾಲಿ ಜಾರಿಯಲ್ಲಿರುವ ತೆರಿಗೆಗಳು ಯಾವುವು; (ವಿವರವಾಗಿ ಸ್ತರವಾರು/ ಸರಕುವಾರು ಮಾಹಿತಿ ಒದಗಿಸುವುದು)

(ಇ) ೨೦೨೦–೨೧ರ ಆರ್ಥಿಕ ವರ್ಷದಲ್ಲಿ ರಾಜಸ್ವಕ್ಕೆ ಶೇಖರಣೆಗೊಂಡ ತೆರಿಗೆ ಪ್ರಮಾಣ ಎಷ್ಟು; ಎಷ್ಟು ಕೊರತೆಯುಂಟಾಗಿದೆ; ಕೊರತೆ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರವಾದ ಮಾಹಿತಿ ಒದಗಿಸುವುದು)

(ಈ) ವಿವಿಧ ತೆರಿಗೆಗಳಿಂದ ರಾಜ್ಯದ ಜನರು ತತ್ತರಿಸುತ್ತಿದ್ದು ರಾಜ್ಯದಲ್ಲಿ ತೆರಿಗೆ ಸುಧಾರಣೆ ಬಗ್ಗೆ ಸರ್ಕಾರವು ಯಾವ ಕ್ರಮಗಳನ್ನು ಕೈಗೊಂಡಿದೆ ?

## ಲೋಕಸೇವಾ ಆಯೋಗದಿಂದ ಗ್ರಾಮೀಣ ಮೀಸಲಾತಿಯಡಿ ಆಯ್ಕೆಗೊಂಡ ಅಭ್ಯರ್ಥಿಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೭ (೬೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಲೋಕಸೇವಾ ಆಯೋಗವನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಇದರ ಉದ್ದೇಶವೇನು; (ವಿವರವಾದ ಮಾಹಿತಿ ಕೊಡುವುದು)

(ಆ) ಕರ್ನಾಟಕ ಲೋಕಸೇವಾ ಆಯೋಗದಿಂದ ಗ್ರೂಪ್ ಎ ಮತ್ತು ಬಿ ವೃಂದದಡಿ ೨೦೦೨ನೇ ವರ್ಷದಿಂದ ಇಲ್ಲಿಯವರೆಗೆ ಆಯ್ಕೆಗೊಂಡ ಅಭ್ಯರ್ಥಿಗಳು ಯಾರು–ಯಾರು; (ವಿವರವಾಗಿ ವರ್ಷವಾರು, ಇಲಾಖಾವಾರು, ಹುದ್ದೆವಾರು ವಿವರವಾದ ಮಾಹಿತಿ ಒದಗಿಸುವುದು)

(ಇ) ಈ ಹುದ್ದೆಗಳಲ್ಲಿ ಗ್ರಾಮೀಣ ಮೀಸಲಾತಿ ಕೋಟಾದಡಿ ಆಯ್ಕೆಗೊಂಡ ಅಭ್ಯರ್ಥಿಗಳು ಯಾರು ? (ವಿವರವಾಗಿ ಅಭ್ಯರ್ಥಿಯ ಹೆಸರು, ಹುದ್ದೆಯ ಪದನಾಮ, ಇಲಾಖೆ ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

## ವಿವಿಧ ಇಲಾಖೆಗಳ ಶೀರ್ಷಿಕೆಯಲ್ಲಿ ನೀಡಲಾಗಿರುವ ಸಹಾಯಧನ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೮ (೬೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳ ಅವಧಿಯಲ್ಲಿ ವಿವಿಧ ಇಲಾಖೆಗಳ ಶೀರ್ಷಿಕೆಯಲ್ಲಿ ಒದಗಿಸಲಾದ ಸಹಾಯಧನ ಎಷ್ಟು; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ವರ್ಷದ ಆಯವ್ಯಯಕ್ಕೆ ಇದು ಶೇಕಡಾವಾರು ಎಷ್ಟು ಆಗುತ್ತದೆ;

(ಇ) ಇಷ್ಟೊಂದು ದೊಡ್ಡ ಮಟ್ಟದ ಸಹಾಯಧನ ಬದಲು ಈ ಮೊತ್ತವನ್ನು ಇತರೆ ಅಭಿವೃದ್ಧಿ ಕಾರ್ಯಗಳಿಗೆ ವಿನಿಯೋಗಿಸಿದರೆ ಹೆಚ್ಚಿನ ಬೆಳವಣಿಗೆಗೆ ಅವಕಾಶ ಸಿಗುವುದರ ಬಗ್ಗೆ ಸರ್ಕಾರದ ನಿಲುವೇನು?

## ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮದಲ್ಲಿ ಕೃಷ್ಣಾ ನದಿಯಿಂದ ಪ್ರತಿ ವರ್ಷ ಪ್ರವಾಹಕ್ಕೀಡಾಗುವ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೨೯ (೬೫೪) ವಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಹಳೇ ದಿಗ್ಗೇವಾಡಿ ಗ್ರಾಮವು ಕೃಷ್ಣಾ ನದಿಗೆ ಅತಿ ಸಮೀಪದಲ್ಲಿದ್ದು, ಪ್ರತಿ ವರ್ಷ ಮಳೆಗಾಲದ ಸಂದರ್ಭದಲ್ಲಿ ಪ್ರವಾಹಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಳೆದ ಮೂರು ವರ್ಷಗಳ ಅವಧಿಯಲ್ಲಿ ಈ ಪ್ರವಾಹದಿಂದ ಆದ ಆಸ್ತಿ–ಪಾಸ್ತಿಗಳ ಹಾನಿಯ ವಿವರ ಒದಗಿಸುವುದು;

(ಇ) ಪ್ರತಿ ವರ್ಷ ಪ್ರವಾಹ ಪರಿಸ್ಥಿತಿ ಎದುರಿಸುತ್ತಿರುವ ಈ ಗ್ರಾಮವನ್ನು ಶಾಶ್ವತವಾಗಿ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೇ;

(ಈ) ಹಾಗಿದ್ದಲ್ಲಿ, ಈ ಯೋಜನೆಯ ರೂಪುರೇಷೆಗಳೇನು; ಹಾಗೂ ಯಾವ ಕಾಲಮಿತಿಯಲ್ಲಿ ಇದನ್ನು ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

**ಬೆಂಗಳೂರು ನಗರ ಹಾಗೂ ಸುತ್ತಮುತ್ತಲಿನ ಟ್ರಾಫಿಕ್ ಸಮಸ್ಯೆ ಬಗ್ಗೆ**

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೦ (೬೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರ ಸುತ್ತಮುತ್ತಲಿನ ಪ್ರದೇಶವು ಜನದಟ್ಟಣೆಯಿಂದ ಕೂಡಿದ್ದು, ಈಗ ಇರುವ ರಸ್ತೆಗಳಲ್ಲಿ ವಾಹನ ದಟ್ಟಣೆಯಿಂದಾಗಿ ಗಂಟೆಗಟ್ಟಲೆ ಟ್ರಾಫಿಕ್‌ನಲ್ಲಿ ಸಿಲುಕಿ ಕಛೇರಿ ಹಾಗೂ ನಿಗದಿತ ತಾಣ ತಲುಪಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಆದಾಗ್ಯೂ ನಗರ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹೊಸ ಬಡಾವಣೆಗಳ ನಿರ್ಮಾಣ ಮಾಡಲಾಗುತ್ತಿದ್ದು, ಈ ಬಡಾವಣೆಗಳ ನಿರ್ಮಾಣದಿಂದ ಇನ್ನೂ ಹೆಚ್ಚಿನ ದಟ್ಟಣೆಯಾಗಿ ಎಲ್ಲಾ ರೀತಿಯ ಸಮಸ್ಯೆಗಳು ಉದ್ಭವವಾಗುವುದನ್ನು ತಡೆಯಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

(ಇ) ಈ ರೀತಿಯ ಬಡಾವಣೆಗಳನ್ನು ನಿರ್ಮಾಣ ಮಾಡುವುದನ್ನು ನಿಲ್ಲಿಸಿ, ಸ್ಯಾಟಲೈಟ್ ಮಾದರಿಯ ನಗರಗಳನ್ನು ಅಭಿವೃದ್ಧಿಪಡಿಸುವ ಯೋಚನೆ ಸರ್ಕಾರಕ್ಕಿದೆಯೇ? (ಮಾಹಿತಿ ನೀಡುವುದು)

## ಸುವರ್ಣ ವಿಧಾನ ಸೌಧದಲ್ಲಿ ಅಧಿವೇಶನ ಸಂದರ್ಭದಲ್ಲಿ ಶಾಸಕರ ವಸತಿ ಸಮಸ್ಯೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೧ (೬೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಅಧಿವೇಶನ ನಡೆಯುವ ಸಂದರ್ಭದಲ್ಲಿ ಶಾಸಕರ ವಸತಿಗಾಗಿ ಸಮಸ್ಯೆಯಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಸಮಸ್ಯೆ ಬಗೆಹರಿಸುವ ನಿಟ್ಟಿನಲ್ಲಿ ಶಾಸಕರ ಭವನ ನಿರ್ಮಾಣ ಮಾಡುವ ಯೋಜನೆ ಕುರಿತು ಸರ್ಕಾರದ ನಿಲುವೇನು;

(ಇ) ಅಧಿವೇಶನ ನಡೆಯದಿರುವ ಸಂದರ್ಭದಲ್ಲಿ ಶಾಸಕರ ಭವನ ಕಟ್ಟಡವನ್ನು ಇತರೆ ಕಾರ್ಯಗಳ ಉಪಯೋಗಕ್ಕೆ ನೀಡುವ ಕುರಿತು ಸರ್ಕಾರದ ನಿಲುವೇನು?

## ಎತ್ತಿನಹೊಳೆ ಯೋಜನೆ ಕಾಮಗಾರಿ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೩೨ (೬೫೫) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಯಲುಸೀಮೆಯ ಜಿಲ್ಲೆಗಳಿಗೆ ನೀರು ಪೂರೈಸುವ ಮಹತ್ವಾಕಾಂಕ್ಷೆಯ ಎತ್ತಿನಹೊಳೆ ಯೋಜನೆಯ ಕಾಮಗಾರಿ ಯಾವ ಹಂತದಲ್ಲಿದೆ;

(ಆ) ಸದರಿ ಯೋಜನೆಗಾಗಿ ಎಷ್ಟು ಎಕರೆ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲಾಗಿದೆ; ಇನ್ನೂ ಎಷ್ಟು ಎಕರೆ ಭೂಮಿಯ ಅವಶ್ಯಕತೆ ಇದೆ;

(ಇ) ಸದರಿ ಯೋಜನೆಗಾಗಿ ಈವರೆಗೂ ಎಷ್ಟು ಹಣ ವೆಚ್ಚ ಮಾಡಲಾಗಿದೆ; ಇನ್ನೂ ಎಷ್ಟು ಹಣದ ಅಗತ್ಯ ಇದೆ; (ಸಂಪೂರ್ಣ ವಿವರ ನೀಡುವುದು)

(ಈ) ಭೂಮಿ ಕಳೆದುಕೊಂಡವರಿಗೆ ಪರಿಹಾರಧನ ಒದಗಿಸಲಾಗಿದೆಯೇ; ಪರಿಹಾರಧನ ವಿತರಿಸಲು ಇರುವ ಮಾನದಂಡವೇನು;

(ಉ) ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲಾಗುವುದು? (ಮಾಹಿತಿ ನೀಡುವುದು)

## ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೫೩೩ (೬೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅನುದಾನಿತ ಶಾಲಾ ಕಾಲೇಜುಗಳಲ್ಲಿ ೨೦೧೫ನೇ ಸಾಲಿನವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಹಾಗೂ ೧೯೮೬ ರಿಂದ ೧೯೯೫ನೇ ಸಾಲಿನವರೆಗಿನ ಕನ್ನಡ ಮಾಧ್ಯಮ ಶಾಲೆಗಳಿಗೆ ಹೊಸದಾಗಿ ವೇತನಾನುದಾನಕ್ಕೆ ಒಳಪಡಲು ಸರ್ಕಾರಕ್ಕೆ ಬಂದಿರುವ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯಿಂದ ಆರ್ಥಿಕ ಮಿತವ್ಯಯ ಕಾರಣ ನೀಡಿ ತಡೆಹಿಡಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ನೇಮಕಾತಿ ಪ್ರಕ್ರಿಯೆಯಲ್ಲಿರುವ ಬೋಧಕರಿಗೆ ವಯೋಮಿತಿ ಮೀರುತ್ತಿರುವುದರಿಂದ ಅವರು ತೊಂದರೆಗೊಳಪಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಾದಲ್ಲಿ ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರಗಳೊಂದಿಗೆ ಮಾಹಿತಿ ಒದಗಿಸುವುದು)

(ಈ) ಯಾವ ಕಾಲಮಿತಿಯಲ್ಲಿ ಆರ್ಥಿಕ ಮಿತವ್ಯಯವನ್ನು ಸಡಿಲಿಸಿ, ಸದರಿ ಕಡತಗಳಿಗೆ ಮಂಜೂರಾತಿ ನೀಡಲಾಗುವುದು?

## ಅರಮನೆ ಮೈದಾನದಲ್ಲಿರುವ ಕಲ್ಯಾಣ ಮಂಟಪಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೫೩೪ (೭೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅರಮನೆ ಮೈದಾನದಲ್ಲಿ ನಡೆಯುತ್ತಿರುವ ಕಲ್ಯಾಣ ಮಂದಿರ/ಕನ್ವೆನ್ಷನ್ ಸೆಂಟರ್‌ಗಳಲ್ಲಿ ಸಾರ್ವಜನಿಕ ಸಮಾರಂಭ/ ಸಮಾವೇಶ ನಡೆಸಲು ಇರುವ ಕಟ್ಟಡಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಮೇಲ್ಕಂಡ ಕಟ್ಟಡಗಳಿಂದ ಸರ್ಕಾರಕ್ಕೆ ಬರುತ್ತಿರುವ ಆದಾಯ ಎಷ್ಟು; (ಬಾಡಿಗೆ, ವಿವಿಧ ರೀತಿಯ ತೆರಿಗೆ ಶುಲ್ಕಗಳ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಇ) ಈ ಸಭೆ/ಸಮಾರಂಭಗಳನ್ನು ನಡೆಸಲು ಅನುಮೋದನೆ ನೀಡಲು ಇರುವ ಮಾನದಂಡಗಳೇನು ;

(ಈ) ಇಲ್ಲಿ ನಡೆಯುವ ಸಭೆ/ಸಮಾರಂಭಗಳಿಂದ ವಾಹನ ದಟ್ಟಣೆಯುಂಟಾಗಿ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಈ ಅರಮನೆ ಮೈದಾನದಲ್ಲಿ ಯಾವುದೇ ಸಮಾರಂಭಗಳಿಗೆ ಅನುಮತಿ ನೀಡದಿರಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ?

## ಸಚಿವಾಲಯಗಳಲ್ಲಿ ಕಡತಗಳ ನಿರ್ವಹಣೆ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೫೩೫ (೬೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಚಿವಾಲಯಗಳಲ್ಲಿ ಕಡತ ವಿಲೇವಾರಿ ಮಂದಗತಿಯಲ್ಲಿ ಸಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಇಲಾಖಾವಾರು ೩ ವರ್ಷಗಳ ವಿವರ ನೀಡುವುದು;

(ಇ) ಈ ಸಚಿವಾಲಯದ ಆಡಳಿತಕ್ಕೆ ಸಕಾಲ ಅನ್ವಯಿಸುವುದಿಲ್ಲವೇ;

(ಈ) ಅನ್ವಯಿಸಿದ್ದಲ್ಲಿ, ಸಕಾಲದ ಅಡಿಯಲ್ಲಿ ನಿಗದಿತ ಸಮಯದಲ್ಲಿ ಕಡತ ವಿಲೇವಾರಿ ಮಾಡದ ನೌಕರರ ವಿವರಗಳನ್ನು ಇಲಾಖಾವಾರು ನೀಡುವುದು;

(ಉ) ಈ ರೀತಿ ಮಂದಗತಿಗೆ ಕಾರಣರಾದ ಅಧಿಕಾರಿ/ಸಿಬ್ಬಂದಿ ವರ್ಗದವರ ಮೇಲೆ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಅಬಕಾರಿ ಇಲಾಖೆಯಲ್ಲಿನ ಸನ್ನದ್ದುಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೫೩೬ (೬೬೧) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಬಕಾರಿ ಇಲಾಖೆಯಲ್ಲಿ ಇರುವ ಸನ್ನದ್ದುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರಗಳನ್ನು ನೀಡುವುದು)

(ಆ) ಅವುಗಳಿಗೆ ಸರ್ಕಾರ ನಿಗದಿಪಡಿಸಿರುವ ವಾರ್ಷಿಕ ಶುಲ್ಕ ಎಷ್ಟು; (ಶುಲ್ಕಗಳ ವಿವರ ನೀಡುವುದು)

(ಇ) ಮೇಲ್ಕಂಡ ಸನ್ನದ್ದುಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು;

(ಈ) ಸಿ.ಎಲ್.–೨ ಹಾಗೂ ಇನ್ನಿತರೆ ಸನ್ನದ್ದುಗಳಲ್ಲಿ ಸ್ಥಳಾಂತರ ಮತ್ತು ಹಸ್ತಾಂತರಕ್ಕೆ ಸರ್ಕಾರ ನಿಗದಿಪಡಿಸುವ ಶುಲ್ಕ ಎಷ್ಟು; ಈ ಮೇಲ್ಕಂಡ ಪ್ರಕ್ರಿಯೆಯಲ್ಲಿ ವ್ಯಾಪಕವಾಗಿ ಭ್ರಷ್ಟಾಚಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಬಂದಿದ್ದಲ್ಲಿ, ಅಂತಹ ಅಧಿಕಾರಿಗಳ ಮೇಲೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಗುಪ್ತಚರ ಇಲಾಖೆ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೫೩೭ (೬೬೩) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದ ಗುಪ್ತಚರ ಇಲಾಖೆ ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದೆಯೇ;

(ಆ) ಈ ಗುಪ್ತಚರ ಇಲಾಖೆಯಲ್ಲಿರುವ ರಾಜ್ಯ ಮಟ್ಟದ/ಜಿಲ್ಲಾ ಮಟ್ಟದ ಅಧಿಕಾರಿ/ಸಿಬ್ಬಂದಿಗಳ ವಿವರ ನೀಡುವುದು;

(ಇ) ಈ ಗುಪ್ತಚರ ಇಲಾಖೆಯ ಬಲವರ್ಧನೆಗೆ ಸರ್ಕಾರ ಕೈಗೊಂಡ ಕ್ರಮಗಳೇನು;

(ಈ) ನಮ್ಮ ರಾಜ್ಯದಲ್ಲಿ ಗುಪ್ತಚರ ಇಲಾಖೆಯನ್ನು ಕೇಂದ್ರ ಸರ್ಕಾರದ ಐ.ಬಿ. ಹಾಗೂ ಇನ್ನಿತರೆ ಗುಪ್ತಚರ ಸಂಸ್ಥೆಗಳಿಗೆ ಸರಿಸಮಾನವಾಗಿ ಬೆಳೆಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಕ್ರೀಡಾ ಪಟುಗಳಿಗೆ ಆರ್ಥಿಕ ನೆರವು ನೀಡುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೩೮ (೬೩೪) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರದಿಂದ ಯುವಕರಿಗೆ ಮತ್ತು ಕ್ರೀಡಾ ಪಟುಗಳಿಗೆ ಆರ್ಥಿಕ ನೆರವಿನ ಯೋಜನೆ ಇದೆಯೇ; ಇದ್ದಲ್ಲಿ ಅದರ (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕ್ರೀಡಾ ಪಟುಗಳು ತಮ್ಮ ಕ್ರೀಡೆಗೆ ಹೆಚ್ಚಿನ ತರಬೇತಿಗೆ ವಿದೇಶಕ್ಕೆ ಅಥವಾ ಹೊರ ರಾಜ್ಯಕ್ಕೆ ಹೋಗಲು ಸರ್ಕಾರ ಮತ್ತು ಇಲಾಖೆಯಿಂದ ಯಾವ ರೀತಿಯ ನೆರವು ನೀಡಲಾಗಿದೆ;

(ಇ) ಮಾರ್ಷಲ್ ಆರ್ಟ್ಸ್ ಕೂಡಾ ಕ್ರೀಡಾ ಇಲಾಖೆಗೆ ಸಂಬಂಧಪಟ್ಟಿದ್ದು, ಇದರ ಹೆಚ್ಚಿನ ತರಬೇತಿಗೆ ಬಹಳಷ್ಟು ಹಣ ಖರ್ಚಾಗುವ ಸಾಧ್ಯತೆ ಇದ್ದು ಇಂತಹ ಕ್ರೀಡಾ ಪಟುಗಳಿಗೆ ವಿಶೇಷ ಪ್ಯಾಕೇಜ್ ಇದೆಯೇ;

(ಈ) ಈ ತನಕ ಕ್ರೀಡಾ ಪಟುಗಳಿಗೆ ಯಾವ ಯಾವ ರೀತಿಯಲ್ಲಿ ಯಾವ ಯಾವ ಕ್ರೀಡೆಗಳಿಗೆ ಎಷ್ಟು ಹಣ ಅಥವಾ ಅನುದಾನ ಇಲಾಖೆಯಿಂದ ನೀಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ಸೌರಶಕ್ತಿಯನ್ನು ಉತ್ಪಾದಿಸುವ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೯ (೬೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಸೌರಶಕ್ತಿಯ ಬಳಕೆಯನ್ನು ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಆ) ಸೌರಶಕ್ತಿಯಿಂದ ಉತ್ಪಾದಿಸುತ್ತಿರುವ ಪ್ರತಿ ತಿಂಗಳ ಸೌರ ವಿದ್ಯುತ್ ಪ್ರಮಾಣ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಇದರಲ್ಲಿ, ಸರ್ಕಾರ ಬಳಸುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು; ಮಾರಾಟ ಮಾಡುತ್ತಿರುವ ಪ್ರಮಾಣ ಎಷ್ಟು?

## ಖಾಲಿಯಿರುವ ಪೊಲೀಸ್ ಹುದ್ದೆಗಳ ನೇಮಕಾತಿ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೫೦ (೬೩೨) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೦ನೇ ಸಾಲಿನಲ್ಲಿ ಪೊಲೀಸ್ ಹುದ್ದೆಗಳ ಭರ್ತಿಗೆ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆಯೇ;

(ಆ) ಹಾಗಿದ್ದಲ್ಲಿ, ಎಷ್ಟು ಪೊಲೀಸ್ ಹುದ್ದೆಗಳು ಖಾಲಿ ಇದ್ದವು; ಈ ತನಕ ಎಷ್ಟು ಅರ್ಜಿಗಳನ್ನು ಸ್ವೀಕರಿಸಲಾಗಿದೆ;

(ಇ) ಸ್ವೀಕರಿಸಿದ ಅರ್ಜಿಗಳಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ;

(ಈ) ಹುದ್ದೆಗಳ ಭರ್ತಿಗೆ ಇರುವ ಮಾನದಂಡಗಳು, ಶೈಕ್ಷಣಿಕ ಅರ್ಹತೆಗಳು ಯಾವುವು? (ಸಂಪೂರ್ಣ ಮಾಹಿತಿ ನೀಡುವುದು)

## ಕೋರ್ಟ್ ಆವರಣಕ್ಕೆ ಬರುವ ಕಕ್ಷಿದಾರರ ಹಾಗೂ ಆರೋಪಿಗಳ ರಕ್ಷಣೆ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೧ (೬೩೦) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋರ್ಟ್ ಆವರಣಕ್ಕೆ ಬರುವಂತಹ ಕಕ್ಷಿದಾರರು, ಆರೋಪಿಗಳಿಗೆ ಯಾವ ರೀತಿ ಸುರಕ್ಷೆ ನೀಡಲಾಗುತ್ತಿದೆ;

(ಆ) ಕೋರ್ಟ್ ಆವರಣದಲ್ಲಿ ವಕೀಲರಿಂದಲೇ ಹಲ್ಲೆ ಆಗುವ ವಾತಾವರಣ ಸೃಷ್ಟಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಅಂತಹ ವಕೀಲರ ವಿರುದ್ಧ ಯಾವ ರೀತಿಯ ಕಾನೂನು ಕ್ರಮ ಜರುಗಿಸಲಾಗುತ್ತದೆ;

(ಈ) ಮುಂದೆ ಇಂತಹ ದುರ್ಘಟನೆ ನಡಯದೆ ಹಾಗೆ ಯಾವ ರೀತಿ ಕಾನೂನು ರೂಪಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡತಕ್ಕದ್ದು)

## ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಕಿಂಡಿ ಅಣೆಕಟ್ಟುಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೫೪೨ (೬೯೩) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ನಿರ್ವಹಿಸಲ್ಪಡುತ್ತಿರುವ ಕಿಂಡಿ ಅಣೆಕಟ್ಟುಗಳು ಎಷ್ಟು; ಅವು ಯಾವುವು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಅವುಗಳ ನಿರ್ವಹಣೆಗೆ ಕಾಯ್ದಿರಿಸಲಾದ ಅನುದಾನವೆಷ್ಟು; ಬಿಡುಗಡೆಯಾದ ಅನುದಾನವೆಷ್ಟು; ಖರ್ಚಾದ ಅನುದಾನ ಎಷ್ಟು; (ವರ್ಷವಾರು ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಇವುಗಳಲ್ಲಿ ಯಾಂತ್ರೀಕೃತ ಗೇಟು ಅಳವಡಿಕೆಯ ಕಿಂಡಿ ಅಣೆಕಟ್ಟುಗಳ ಸಂಖ್ಯೆ ಎಷ್ಟು; ಅವುಗಳು ಯಾವುವು ; ಅವುಗಳ ವಾರ್ಷಿಕವಾಗಿ ನಿರ್ವಹಣೆಗೆ ತಗಲುವ ವೆಚ್ಚವೆಷ್ಟು ; ಹಲಗೆ ಅಳವಡಿಸುವ ಕಿಂಡಿ ಆಣೆಕಟ್ಟುಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; ಅವುಗಳ ವಾರ್ಷಿಕವಾಗಿ ನಿರ್ವಹಣೆಗೆ ತಗಲುವ ವೆಚ್ಚವೆಷ್ಟು ?

## ವಾರಾಹಿ ಎಡದಂಡೆ ಕಾಲುವೆ ಯೋಜನೆಯ ಅನುಷ್ಠಾನದಲ್ಲಿ ವಿಳಂಬ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೩ (೬೭) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೪೧ ವರ್ಷಗಳ ಹಿಂದೆ ಪ್ರಾರಂಭಗೊಂಡ ವಾರಾಹಿ ನೀರಾವರಿ ಯೋಜನೆಯ ಎಡದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಗ್ರಾಮಗಳು ಯಾವುವು ; ಅವುಗಳ ಒಟ್ಟು ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ; ಅವುಗಳಲ್ಲಿ ಈಗ ನೀರಾವರಿ ಸೌಲಭ್ಯವನ್ನು ಪಡೆಯುತ್ತಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ; (ತಾಲ್ಲೂಕು, ಗ್ರಾಮವಾರು ವಿವರ ನೀಡುವುದು)

(ಆ) ವಾರಾಹಿ ಎಡದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಮಾರ್ಗದಲ್ಲಿ ಭೂಸ್ವಾಧೀನತೆಗೆ ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ; (ವಿಳಾಸದೊಂದಿಗೆ ಮಾಹಿತಿ ನೀಡುವುದು) ಈ ಭೂ ಸ್ವಾಧೀನ ಪ್ರಕ್ರಿಯೆಗೆ ಅಗತ್ಯವಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಫಲಾನುಭವಿಗಳಿಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; (ಗ್ರಾಮವಾರು ವಿವರ ನೀಡುವುದು)

(ಇ) ವಾರಾಹಿ ಎಡದಂಡೆ ಕಾಲುವೆ ಮತ್ತು ಉಪಕಾಲುವೆಗಳು ಹಾದು ಹೋಗುವ ಮಾರ್ಗದಲ್ಲಿ ಬರುವ ಸರ್ಕಾರಿ ಭೂಮಿಯ ವಿಸ್ತೀರ್ಣವೆಷ್ಟು ; ಅವುಗಳಲ್ಲಿ ಭೂ ಸ್ವಾಧೀನತೆ ಪಡೆದುಕೊಳ್ಳಲು

ಬಾಕಿಯಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಗ್ರಾಮವಾರು ವಿವರ ನೀಡುವುದು)

(ಈ) ವಾರಾಹಿ ನೀರಾವರಿ ಎಡದಂಡೆ ಕಾಲುವೆಯನ್ನು ಪೂರ್ಣ ಅನುಷ್ಠಾನಗೊಳಿಸಲು ಅಗತ್ಯವಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆಯ ಕಾಲಮಿತಿ ಯಾವುದು ?

## ರಾಜ್ಯದಲ್ಲಿ ಸಣ್ಣ ಮತ್ತು ಅತಿ ಸಣ್ಣ ರೈತರ ಕೃಷಿ ನೀರಾವರಿ ಪಂಪುಸೆಟ್‌ಗಳಿಗೆ ಕಾಲಮಿತಿಯಲ್ಲಿ ಸಂಪರ್ಕ ಕಲ್ಪಿಸದಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೪ (೬೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮೆಸ್ಕಾಂ ವ್ಯಾಪ್ತಿಯಲ್ಲಿ ರೈತರ ಕೃಷಿ ಪಂಪು ಸೆಟ್‌ಗಳಿಗೆ ಮಾರ್ಗ ವಿಸ್ತರಣೆ ಯೋಜನೆಯಲ್ಲಿ ನೋಂದಾಯಿಸಲಾದ ಅರ್ಜಿಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಶುಲ್ಕವನ್ನು ಪಾವತಿಸದ ಅರ್ಜಿಗಳ ಸಂಖ್ಯೆ ಎಷ್ಟು ;

(ಆ) ಈ ಶುಲ್ಕ ಪಾವತಿಸಿದ ರೈತರ ಜೇಷ್ಠತಾ ಪಟ್ಟಿಯನ್ನು ಪಾರದರ್ಶಕವಾಗಿಸಲು ಇಲಾಖೆಯಿಂದ ಕೈಗೊಂಡ ಕ್ರಮಗಳಾವುವು ; ರೈತರು ಇಲಾಖಾ ವೆಬ್ ಸೈಟ್‌ಗಳ ಮೂಲಕ ಜೇಷ್ಠತೆಯನ್ನು ತಿಳಿಯಲು ಅವಕಾಶವನ್ನು ಕಲ್ಪಿಸಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಈ ಮೂಲಭೂತ ಸೌಕರ್ಯವನ್ನು ಕಲ್ಪಿಸಲು ಶುಲ್ಕವನ್ನು ಪಾವತಿಸಿಕೊಂಡರೂ ಸಹಾ ಸಾಮಾಗ್ರಿಗಳನ್ನು ನೀಡದೇ ವರ್ಷಾನುಗಟ್ಟಲೇ ವಿದ್ಯುತ್ ಸಂಪರ್ಕವನ್ನು ನೀಡದಿರಲು ಕಾರಣವೇನು ; ಇದರಿಂದ ರೈತರ ಕೃಷಿ ಚಟುವಟಿಕೆಗಳಿಗೆ ತೊಂದರೆಯಾಗಿ ಆರ್ಥಿಕ ನಷ್ಟವನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಅರ್ಜಿಗಳಿಗೆ ಕಲ್ಪಿಸಲು ಕನಿಷ್ಠ ಕಾಲಮಿತಿಯುನ್ನು ನಿಗದಿ ಪಡಿಸಲು ಇರುವ ತೊಡಕುಗಳೇನು?

## ವಾರಾಹಿ ಬಲದಂಡೆ ಕಾಲುವೆ ಯೋಜನೆಯ ಅನುಷ್ಠಾನದಲ್ಲಿ ಆಗುತ್ತಿರುವ ವಿಳಂಬ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪೫ (೬೦) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಪ್ರಗತಿಯಲ್ಲಿರುವ ನೀರಾವರಿ ಯೋಜನೆಗಳು ಯಾವುವು ; ಕಳೆದ ಮೂರು ವರ್ಷಗಳಲ್ಲಿ ಈ ಯೋಜನೆಗಳಿಗೆ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು, ಯೋಜನಾವಾರು ಮಾಹಿತಿಯನ್ನು ನೀಡುವುದು)

(ಆ) ೪೧ ವರ್ಷಗಳ ಹಿಂದೆ ಪ್ರಾರಂಭಗೊಂಡ ವಾರಾಹಿ ನೀರಾವರಿ ಯೋಜನೆಯ ಬಲದಂಡೆ ಕಾಲುವೆ ಮತ್ತು ಉಪಕಾಲುವೆಯು ಹಾದು ಹೋಗುವ ಗ್ರಾಮಗಳು ಯಾವುವು ; ಅವುಗಳ ಒಟ್ಟು ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ; ಅವುಗಳಲ್ಲಿ ಈಗ ನೀರಾವರಿ ಸೌಲಭ್ಯವನ್ನು ಪಡೆಯುತ್ತಿರುವ ಅಚ್ಚು ಕಟ್ಟು ಪ್ರದೇಶದ ವಿಸ್ತೀರ್ಣ

ವೆಷ್ಟು ; ಬಾಕಿಯಿರುವ ಅಚ್ಚುಕಟ್ಟು ಪ್ರದೇಶದ ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ವಾರಾಹಿ ನೀರಾವರಿ ಬಲದಂಡೆ ಕಾಲುವೆಯನ್ನು ಪೂರ್ಣ ಅನುಷ್ಠಾನಗೊಳಿಸಲು ಅಗತ್ಯವಾದ ಅನುದಾನವೆಷ್ಟು ; ಬಿಡುಗಡೆಯಾದ ಅನುದಾನವೆಷ್ಟು ; ಬಿಡುಗಡೆಗೆ ಬಾಕಿಯಿರುವ ಅನುದಾನವೆಷ್ಟು ; ಯೋಜನೆಯನ್ನು ಪೂರ್ಣಗೊಳಿಸಲು ಇಲಾಖೆಯ ಕಾಲಮಿತಿ ಯಾವುದು ?

## ಬಿ.ಎಂ.ಆರ್.ಸಿ.ಎಲ್ ನಿಂದ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೪೬ (೭೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಎಂ.ಆರ್.ಸಿ.ಎಲ್ ಯಿಂದ ನಡೆಯುತ್ತಿರುವ ಕಾಮಗಾರಿಗಳಾವುವು ; (ಹಾಲಿ ಮೆಟ್ರೋ ಸೇವೆಗಳ ವಿವರ ಒದಗಿಸುವುದು)

(ಆ) ಯಾವ ಮಾರ್ಗದಲ್ಲಿ ಹೊಸದಾಗಿ ಮೆಟ್ರೋ ಸಂಚಾರವನ್ನು ಪ್ರಾರಂಭಿಸಲು ನಿರ್ಧರಿಸಲಾಗಿದೆ ; ಇದಕ್ಕಾಗಿ ಹಣ ಎಷ್ಟು ಬೇಕಾಗುತ್ತದೆ ? (ವಿವರವಾದ ಮಾಹಿತಿ ನೀಡುವುದು)

## ವಿಂಡ್ ಮಿಲ್‌ಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೪೭ (೭೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ವಿಂಡ್ ಮಿಲ್‌ಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ವಿಂಡ್ ಮಿಲ್‌ಗಳಿಂದ ಉತ್ಪತ್ತಿಯಾಗುತ್ತಿರುವ ವಿದ್ಯುತ್ ಪ್ರಮಾಣ ಎಷ್ಟು ; ಸರ್ಕಾರ ಇದನ್ನು ಖರೀದಿಸಲು ನೀಡುತ್ತಿರುವ ಹಣವೆಷ್ಟು ; (ವಿವರ ಒದಗಿಸುವುದು)

(ಇ) ವಿಂಡ್ ಮಿಲ್‌ಗಳು ಯಾರ ಒಡೆತನದಲ್ಲಿದೆ ? (ವಿವರ ಒದಗಿಸುವುದು)

## ರಾಜ್ಯದ ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳ ಕುರಿತು

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೪೮ (೭೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಯಾವ ಯಾವ ವೃಂದದಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ;

(ಆ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ರಕ್ಷಕ ದಳದವರ ಬಗ್ಗೆ

**ಶ್ರೀ ಪ್ರಕಾಶ್ ಕೆ.ರಾಥೋಡ್ (ನಾಮನಿರ್ದೇಶನ ಹೊಂದಿದವರು) :–**

೫೪೯ (೭೦೫) ಮಾನ್ಯ ಗೃಹ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ರಕ್ಷಕ ದಳದವರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಗೃಹ ರಕ್ಷಕದಳದವರು ಯಾವ ಯಾವ ಇಲಾಖೆಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ;

(ಇ) ಬೆಂಗಳೂರು ನಗರ ಪೊಲೀಸ್ ಸಿವಿಲ್ ಹಾಗೂ ಟ್ರಾಫಿಕ್‌ನಲ್ಲಿ ಮತ್ತು ಇತರೆ ಭಾಗದಲ್ಲಿ ಕಾರ್ಯನಿರ್ವಹಿಸುತ್ತಿರುವವರಿಗೆ ನೀಡುತ್ತಿರುವ ವೇತನ ಹಾಗೂ ಇತರೆ ಭತ್ಯೆಗಳು ಯಾವುವು ? (ವಿವರ ನೀಡುವುದು)

## ಪಾನೀಯ ನಿಗಮದಿಂದ ಅಬಕಾರಿ ಸನ್ನದುದಾರರು ೨೦೧೯-೨೦೨೦-೨೦೨೧ನೇ ಸಾಲಿನಲ್ಲಿ ಖರೀದಿ ಮಾಡಿರುವ ಮದ್ಯ ಮಾದರಿಗಳ ವಿವರ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫೦ (೬೯) ಮಾನ್ಯ ಅಬಕಾರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೯-೨೦ ಮತ್ತು ೨೦೨೦-೨೧ನೇ ಸಾಲಿನಲ್ಲಿ ಪಾನೀಯ ನಿಗಮದಲ್ಲಿ ಅಬಕಾರಿ ಸನ್ನದುದಾರರು ಖರೀದಿ ಮಾಡಿರುವ ಮದ್ಯದ ಮಾದರಿಗಳ ವಿವರ ನೀಡುವುದು ;

(ಆ) ರಾಜ್ಯದಲ್ಲಿ ೨೦೧೯ ರಿಂದ ಇಲ್ಲಿಯವರೆಗೆ ಮದ್ಯದ ಮಾರಾಟದಿಂದ ಬಂದಿರುವ ತೆರಿಗೆ ಮೊತ್ತ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಎಂ.ಎಸ್.ಐ.ಎಲ್ ಮೂಲಕವಲ್ಲದೆ ಖಾಸಗಿಯಾಗಿ ಹೊಸದಾಗಿ ಮದ್ಯದ ಅಂಗಡಿಯ ಪರವಾನಗಿಯನ್ನು ನೀಡಲಾಗುತ್ತಿದೆಯೇ ? (ಪೂರ್ಣ ವಿವರ ನೀಡುವುದು)

## ರಾಜ್ಯದಲ್ಲಿ ಮಕ್ಕಳು ಮತ್ತು ಮಹಿಳೆಯರ ಕಳ್ಳ ಸಾಗಾಣಿಕೆಯಾಗುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೧ (೬೨೦) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಮಕ್ಕಳು ಮತ್ತು ಮಹಿಳೆಯರ ಕಳ್ಳ ಸಾಗಾಣಿಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ರಾಜ್ಯದಲ್ಲಿ ಇಲ್ಲಿಯವರೆಗೆ ಎಷ್ಟು ಪ್ರಕರಣ ದಾಖಲಾಗಿವೆ ? (ಜಿಲ್ಲಾವಾರು ವಿವರ ನೀಡುವುದು)

## ಬೆಂಗಳೂರು ನಗರದ ಮಾಲ್, ಥಿಯೇಟರ್ ಮತ್ತು ಖಾಸಗಿ ಸಂಸ್ಥೆಗಳಲ್ಲಿ ವಾಹನ ನಿಲುಗಡೆಗೆ ದುಬಾರಿ ಶುಲ್ಕ ವಸೂಲಿ ಮಾಡುತ್ತಿರುವ ಬಗ್ಗೆ

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೫೨ (೬೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದ ಮಾಲ್, ಥಿಯೇಟರ್ ಮತ್ತು ಖಾಸಗಿ ಸಂಸ್ಥೆಗಳಲ್ಲಿ ವಾಹನ ನಿಲುಗಡೆಗೆ ದುಬಾರಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಪಾರ್ಕಿಂಗ್ ದರ ನಿಗದಿ ಮಾಡಲು ಇರುವ ಮಾನದಂಡಗಳೇನು ?

## ರಾಜ್ಯದ ಎನ್.ಪಿ.ಎಸ್. ನೌಕರರ ಹೊಸ ಪಿಂಚಣಿ ಯೋಜನೆಯ ಬದಲು ಹಳೆಯ ಯೋಜನೆಯನ್ನು ಮುಂದುವರಿಸುವ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೩ (೬೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎನ್.ಪಿ.ಎಸ್. ನೌಕರರ ಹೊಸ ಪಿಂಚಣಿ ಯೋಜನೆಯ ಬದಲು ಹಳೆಯ ಯೋಜನೆಯನ್ನೇ ಮುಂದುವರೆಸಲು ಸರ್ಕಾರದ ಮುಂದಿರುವ ಸಮಸ್ಯೆಗಳೇನು ; ಎನ್.ಪಿ.ಎಸ್. ನೌಕರರು ಮರಣ ಹೊಂದಿದರೆ ಅವರ ಕುಟುಂಬದವರಿಗೆ ಕೆಲಸ ನೀಡುವ ಬಗ್ಗೆ ಸರ್ಕಾರ ಚಿಂತನೆ ನಡೆಸಿದೆಯೇ ; (ಮಾಹಿತಿ ನೀಡುವುದು)

(ಆ) ಎನ್.ಪಿ.ಎಸ್. ನೌಕರರ ವೇತನದಲ್ಲಿ ಶೇ ೧೦ ರಷ್ಟನ್ನು ಕಡಿತಗೊಳಿಸಲಾಗಿದ್ದು, ಇದನ್ನು ಯಾವ ಖಾತೆಗೆ ಜಮಾ ಮಾಡಲಾಗಿದೆ ; (ವಿವರ ನೀಡುವುದು)

(ಇ) ಎನ್.ಪಿ.ಎಸ್. ನೌಕರರಿಗೆ ಜಿ.ಪಿ.ಎಫ್. ಖಾತೆ ತೆರೆಯುವ ಕುರಿತು ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಈ) ರಾಜ್ಯದ ಬೇರೆ ಬೇರೆ ಭಾಗಗಳಲ್ಲಿ ಸರ್ಕಾರಿ ಕಛೇರಿಯಲ್ಲಿ ಕೊರತೆಯಿರುವ ಸಿಬ್ಬಂದಿಗಳ ಭರ್ತಿ ಪ್ರಕ್ರಿಯೆ ಪೂರ್ಣವಾಗಿದೆಯೇ ? (ವಿವರಗಳೊಂದಿಗೆ ಮಾಹಿತಿ ನೀಡುವುದು)

## ಬಿ.ಬಿ.ಎಂ.ಪಿ. ದಾನಪತ್ರ ಕ್ರಯಪತ್ರ ಮತ್ತು ವಿಭಾಗಗಳ ಪತ್ರ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೪ (೬೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ. ದಾನಪತ್ರ, ಕ್ರಯಪತ್ರ ಮತ್ತು ವಿಭಾಗ ಪತ್ರಗಳ ಅನ್ವಯ ಆಸ್ತಿ ವಿಭಜನೆ ಕಾನೂನುಬಾಹಿರವೆಂದು ೨೦ ಅಕ್ಟೋಬರ್ ೨೦೧೪ರಲ್ಲಿ ಸುತ್ತೋಲೆ ಹೊರಡಿಸಿರುವುದು ನಿಜವೇ ; (ವಿವರ ನೀಡುವುದು)

(ಆ) ಕೇವಲ ಆಸ್ತಿ ತೆರಿಗೆ, ಶುಲ್ಕ ಮಾತ್ರ ವಸೂಲಿ ಮಾಡುವ ಮಹಾನಗರ ಪಾಲಿಕೆ ಆಸ್ತಿ ವಿಭಜನೆಯ ಕುರಿತು ಯಾವ ಆದೇಶ ನಿಯಮಾವಳಿ ಅನ್ವಯ ಈ ಸುತ್ತೋಲೆ ಹೊರಡಿಸಿದೆ ;

(ಇ) ಬಿ.ಬಿ.ಎಂ.ಪಿ. ಸುತ್ತೋಲೆಯ ಪ್ರಕಾರ ಖಾತಾ ನೊಂದಾವಣೆ ವಿಭಜನೆಗಳು ಯಾವ ಆಸ್ತಿಗೆ ಅನ್ವಯಿಸುತ್ತವೆ ; ಪಾಲಿಕೆಯ ಸುತ್ತೋಲೆಯಿಂದ ಪಿತ್ರಾರ್ಜಿತ ಆಸ್ತಿ ಹಂಚಿಕೆಯಲ್ಲಿ ಜನಸಾಮಾನ್ಯರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಎ ಖಾತಾ ಮತ್ತು ಬಿ ಖಾತಾ ನಡುವಿನ ವ್ಯತ್ಯಾಸಗಳೇನು ; ಬಿ ಖಾತಾ ಹೆಸರಿನಲ್ಲಿ ದಂದೆ ನಡೆಯುತ್ತಿರುವುದು ಮತ್ತು ಜನರನ್ನು ಬಿ.ಬಿ.ಎಂ.ಪಿ. ಖಾತೆಯ ಹೆಸರಲ್ಲಿ ಶೋಷಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಭದ್ರಾ ಮೇಲ್ದಂಡೆ ಯೋಜನೆ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೫ (೬೨೯) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯ ಮಳೆ ನೆರಳಿನ ಹಾಗೂ ಗಣಿ ಬಾಧಿತ ತಾಲ್ಲೂಕುಗಳಾದ ಗುಬ್ಬಿ, ತಿಪಟೂರು, ಚಿಕ್ಕನಾಯಕನಹಳ್ಳಿ, ಶಿರಾಗಳಿಗೆ ಸಂಪೂರ್ಣ ನೀರಾವರಿ ಕಲ್ಪಿಸುವ ಭದ್ರಾ ಮೇಲ್ದಂಡೆ ಯೋಜನೆ ಕಾಮಗಾರಿಯ ಸದ್ಯದ ಸ್ಥಿತಿಗತಿಗಳೇನು ; (ಮಾಹಿತಿ ನೀಡುವುದು)

(ಆ) ಭದ್ರಾ ಮೇಲ್ದಂಡೆ ಯೋಜನೆಗೆ ಈವರೆಗೆ ಆದ ಖರ್ಚು ವೆಚ್ಚಗಳೆಷ್ಟು ; (ಮಾಹಿತಿ ನೀಡುವುದು)

(ಇ) ಕೋಲಾರ ಹಾಗೂ ಚಿಕ್ಕಬಳ್ಳಾಪುರ ಜಿಲ್ಲೆಗಳಿಗೆ ನೀರು ಒದಗಿಸುವ ಎತ್ತಿನಹೊಳೆ ಯೋಜನೆ ಯಾವ ಹಂತದಲ್ಲಿದೆ ; (ಮಾಹಿತಿ ನೀಡುವುದು)

(ಈ) ಕಳೆದೆರಡು ವರ್ಷಗಳಿಂದ ಬಯಲುಸೀಮೆಗೆ ನೀರಾವರಿ ಕಲ್ಪಿಸಲು ಸರ್ಕಾರ ವ್ಯಯಿಸಿದ ಹಣವೆಷ್ಟು ; (ಮಾಹಿತಿ ನೀಡುವುದು)

(ಉ) ಸಿಂಗಟಾಲೂರು ಹುಲಿಗುಡ್ಡ ಏತ ನೀರಾವರಿ ಯೋಜನೆಯ ಕಾಮಗಾರಿ ಸಮರ್ಪಕವಾಗಿ ನಡೆಯುತ್ತಿದೆಯೇ ? (ಮಾಹಿತಿ ನೀಡುವುದು)

## ಐ.ಎಂ.ಎ. ಹಗರಣದಲ್ಲಿ ಭಾಗಿಯಾದ ಐ.ಪಿ.ಎಸ್. ಅಧಿಕಾರಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೬ (೭೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಐ.ಎಂ.ಎ. ಹಗರಣದಲ್ಲಿ ಐ.ಪಿ.ಎಸ್. ಅಧಿಕಾರಿಗಳು ೨೦ ಕೋಟಿಗೂ ಅಧಿಕ ಹಣ ಪಡೆದಿರುವುದಾಗಿ ಸಿ.ಬಿ.ಐ. ಚಾರ್ಜ್‌ಶೀಟ್‌ನಲ್ಲಿ ದಾಖಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸದರಿ ಆರೋಪದ ಬಗ್ಗೆ ಲೋಕಾಯುಕ್ತ, ಎ.ಸಿ.ಬಿ. ಇಡಿ ಇನ್‌ಕಾಮ್ ಟ್ಯಾಕ್ಸ್ ವಿಭಾಗಗಳಿಗೆ ಮಾಹಿತಿ ನೀಡಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಇ) ಕೇವಲ ಭ್ರಷ್ಟಾಚಾರದ ಆರೋಪದ ಕಾರಣಕ್ಕಾಗಿ ರಾಜಕಾರಣಿಗಳು ರಾಜೀನಾಮೆ ನೀಡಿ ಜೈಲಿಗೆ ಹೋಗಿರುವಾಗ ಐ.ಪಿ.ಎಸ್. ಅಧಿಕಾರಿಗಳನ್ನು ಬಂಧಿಸದಿರಲು ಕಾರಣವೇನು ;

(ಈ) ಐ.ಎಂ.ಎ. ಹಗರಣಕ್ಕೆ ಸಂಬಂಧಿಸಿದಂತೆ ೧೦೦೦ ಪುಟಗಳ ಚಾರ್ಜ್‌ಶೀಟ್ ದಾಖಲಾದರೂ ಐ.ಪಿ.ಎಸ್. ಅಧಿಕಾರಿಗಳಿಗೆ ಯಾರ ಒತ್ತಡದಲ್ಲಿ ಪೋಸ್ಟಿಂಗ್ ನೀಡಲಾಗಿದೆ ; ಐ.ಪಿ.ಎಸ್. ಅಧಿಕಾರಿಗಳ ಮೇಲೆ ಭ್ರಷ್ಟಾಚಾರದ ಆರೋಪ ಇರುವ ಕುರಿತು ಕೇಂದ್ರ ಸರ್ಕಾರಕ್ಕೆ ಅಮಾನತ್ತಿಗೆ ಅನುಮತಿ ಕೋರಿ ಯಾವಾಗ ಪತ್ರ ಬರೆಯಲಾಗಿದೆಯೇ ; ಇಲ್ಲವಾದಲ್ಲಿ ಕಾರಣವೇನು ;

(ಉ) ನ್ಯಾಯಾಲಯಕ್ಕೆ ಚಾರ್ಜ್‌ಶೀಟ್ ದಾಖಲಾದ ಸರ್ಕಾರಿ ನೌಕರರ ಮೇಲೆ ಸಾಮಾನ್ಯವಾಗಿ ಕೈಗೊಳ್ಳುವ ಕ್ರಮಗಳೇನು ; ಹಾಗೂ ಈ ಕುರಿತು ಇರುವ ನಿಯಮಗಳೇನು ?

## ಕೊಳಚೆ ಮಂಡಳಿಯ ವತಿಯಿಂದ ಸ್ವಾಧೀನ ಪತ್ರ ನೀಡಿರುವ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೭ (೬೦೩+೬೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ದಕ್ಷಿಣ ತಾಲ್ಲೂಕು, ಕೃಷ್ಣರಾಜಪುರ ಹೋಬಳಿ, ಕೃಷ್ಣರಾಜಪುರ ಗ್ರಾಮದ ಸರ್ವೆ ನಂ.೫೮ರ ಸರ್ಕಾರಿ ಕೆರೆಯ ಪ್ರಸ್ತುತ ವಿಸ್ತೀರ್ಣವೆಷ್ಟು ; ೧೯೯೧ಕ್ಕಿಂತ ಮುಂಚೆ ಇದ್ದ ಕೆರೆಯ ವಿಸ್ತೀರ್ಣವೆಷ್ಟು ; ಈ ಕೆರೆಯು ಯಾವ ಇಲಾಖೆಯ ಅಧೀನಕ್ಕೆ ಬರುತ್ತದೆ ;

(ಆ) ಸದರಿ ಸರ್ಕಾರಿ ಕೆರೆಯನ್ನು ಒತ್ತುವರಿ ಮಾಡಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಒತ್ತುವರಿಯಾದ ಜಾಗದ ವಿಸ್ತೀರ್ಣವೆಷ್ಟು ;

(ಇ) ಕಂದಾಯ ಇಲಾಖೆಯ ಜಮೀನಿಗೆ ಕೊಳಚೆ ನಿರ್ಮೂಲನಾ ಮಂಡಳಿಯವರು ಯಾವ ನಿಯಮದ ಪ್ರಕಾರ ಸ್ವಾಧೀನ ಪತ್ರವನ್ನು ನೀಡಬಹುದು ; ಇದನ್ನು ಯಾವ ಕಾನೂನಿನ ಅಡಿಯಲ್ಲಿ ಅಧಿಕೃತವೆಂದು ಪರಿಗಣಿಸಲಾಗಿದೆ ;

(ಈ) ನಿಯಮ ಬಾಹಿರವಾಗಿ ಕೊಳಚೆ ನಿರ್ಮೂಲನಾ ಮಂಡಳಿಯ ಅಧಿಕಾರಿಗಳು ತಮ್ಮದಲ್ಲದ ಇಲಾಖೆಯ ವ್ಯಾಪ್ತಿಗೆ ಬರದಿರುವ ಜಾಗಕ್ಕೆ ಸ್ವಾಧೀನ ಪತ್ರ ನೀಡಿರುವುದಾದರೆ ಅಂತಹ ಅಧಿಕಾರಿಗಳ

ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗಿದೆಯೇ ; ಇಲ್ಲವಾದಲ್ಲಿ ಯಾವ ಕಾಲಮಿತಿಯೊಳಗೆ ಪ್ರಕರಣ ದಾಖಲಿಸಲಾಗುವುದು ?

## ಗಣಿಗಾರಿಕೆಗೆ ಬಳಸುವ ಜಿಲೆಟಿನ್ ಕಡ್ಡಿಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೮ (೬೦೨) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿಗಾರಿಕೆಗೆ ಬಳಸುವ ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಮಾರಾಟ ಮಾಡಲು ಎಷ್ಟು ಮಾರಾಟಗಾರರಿಗೆ ಅನುಮತಿ ನೀಡಲಾಗಿದೆ ; ಅನುಮತಿ ನೀಡಲು ಇರುವ ಮಾನದಂಡಗಳೇನು ; ಜಿಲ್ಲೆಯಲ್ಲಿ ಈ ವ್ಯವಹಾರಕ್ಕೆ ಅನುಮತಿ ನೀಡುವ ಸಕ್ಷಮ ಅಧಿಕಾರಿ ಯಾರು ;

(ಆ) ಬೆಂಗಳೂರು ನಗರದಲ್ಲಿ ಕಳೆದ ಎರಡು ವರ್ಷಗಳಲ್ಲಿ ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಮಾರಾಟಗಾರರು ಯಾವ ವ್ಯಕ್ತಿಗಳಿಗೆ ಮಾರಾಟ ಮಾಡಿದ್ದಾರೆ ;

(ಇ) ಜಿಲೆಟಿನ್ ಕಡ್ಡಿ, ಡೈನಮೈಟ್ ಸೇರಿದಂತೆ ಸ್ಫೋಟಕಗಳನ್ನು ಸಂಗ್ರಹಿಸಿ ಇಡಲು ತೆಗೆದುಕೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳೇನು ; ಈ ವಸ್ತುಗಳ ಮಾರಾಟಗಾರರು ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿರುವ ಬಗ್ಗೆ ಪರಿಶೀಲಿಸುವ ಅಧಿಕಾರ ಯಾರಿಗಿದೆ ?

## ದೇವಸ್ಥಾನಗಳು ಬಳಸುವ ವಿದ್ಯುತ್ ದರ ನಿಗದಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೫೯ (೫೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ದೇವಸ್ಥಾನಗಳಿಗೆ ಬಳಸುವ ಒಂದು ಯುನಿಟ್ ವಿದ್ಯುತ್‌ಗೆ ಎಷ್ಟು ದರವನ್ನು ನಿಗದಿಪಡಿಸಿದೆ ;

(ಆ) ಸರ್ಕಾರವು ರಾಜ್ಯದಲ್ಲಿ ಮಸೀದಿ ಮತ್ತು ಚರ್ಚ್‌ಗಳು ಬಳಸುವ ಒಂದು ಂಯುನಿಟ್ ವಿದ್ಯುತ್‌ಗೆ ಎಷ್ಟು ದರವನ್ನು ನಿಗದಿಪಡಿಸಲಾಗಿದೆ;

(ಇ) ಗುರುದ್ವಾರ, ದರ್ಗಾ ಹಾಗೂ ಮದರಸಗಳು ಬಳಸುವ ಒಂದು ಯುನಿಟ್ ವಿದ್ಯುತ್ ನಿಗದಿಪಡಿಸಿದ ದರ ಎಷ್ಟು ?

## ಬಿಡಿಎ ವ್ಯಾಪ್ತಿಯಲ್ಲಿ ಕಳೆದ ೫ ವರ್ಷಗಳಲ್ಲಿ ನಿರ್ಮಾಣವಾದ ಬಡಾವಣೆಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೬೦ (೬೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಡಿಎ ವ್ಯಾಪ್ತಿಯಲ್ಲಿ (ಬಿಡಿಎ ವ್ಯಾಪ್ತಿ ಪ್ರದೇಶ ಮತ್ತು ಬಿ.ಬಿ.ಎಂ.ಪಿ. ವ್ಯಾಪ್ತಿ ಪ್ರದೇಶ ಒಳಗೊಂಡಂತೆ) ಕಳೆದ ೫ ವರ್ಷಗಳಲ್ಲಿ ಎಷ್ಟು ಖಾಸಗಿ ಬಡಾವಣೆಗಳನ್ನು ನಿರ್ಮಾಣ ಮಾಡುವುದಕ್ಕೆ ಅನುಮತಿ ನೀಡಲಾಗಿದೆ ; ಅನುಮತಿ ಪಡೆಯದೆ ನಿರ್ಮಾಣಗೊಂಡ ಬಡಾವಣೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕ ವಿವರ ನೀಡುವುದು)

(ಆ) ಬಿಡಿಎ ಅನುಮತಿ ಕೊಟ್ಟ ಬಡಾವಣೆಗಳಲ್ಲಿ ಮೂಲಭೂತ ಸೌಕರ್ಯ ಕಲ್ಪಿಸಲು ಬಿಡಿಎ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ಅನುಮತಿ ಪಡೆಯದೆ ನಿರ್ಮಾಣಗೊಂಡ ಅನಧಿಕೃತ ಖಾಸಗಿ ಬಡಾವಣೆಗಳಲ್ಲಿ cdp/rcdp ಮತ್ತು Master Plan ನ ಪ್ರಕಾರ Arterial ಮತ್ತು Sub Arterial ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆಯೇ ; ಮತ್ತು ಮುಖ್ಯ ರಸ್ತೆಗಳಿಗೆ ಸಂಪರ್ಕ ಕಲ್ಪಿಸಲಾಗಿದೆಯೇ ; (ವಿವರ ನೀಡುವುದು)

(ಈ) ಅನುಮತಿ ಪಡೆಯದಿರುವ ಬಡಾವಣೆಗಳಲ್ಲಿ ನಾಗರೀಕ ಸವಲತ್ತು (Civic Amenities) ಗಳನ್ನು ಕಲ್ಪಿಸಲು ಬಿಡಿಎ ತೆಗೆದುಕೊಂಡ ಕ್ರಮವೇನು; (ವಿವರ ನೀಡುವುದು)

(ಉ) ಬಿಡಿಎ ದಿಂದ ಅನುಮತಿ ಪಡೆದ ಬಡಾವಣೆಗಳಲ್ಲಿ ಒಳಚರಂಡಿ ಸಂಸ್ಕರಣಾ ಘಟಕಗಳನ್ನು (STP) ಸ್ಥಾಪಿಸಲಾಗಿದೆಯೇ ; ಸ್ಥಾಪಿಸಿದ್ದಲ್ಲಿ, ಎಷ್ಟು ಬಡಾವಣೆಗಳಲ್ಲಿ (STP) ಸ್ಥಾಪಿಸಲಾಗಿದೆ; ಮತ್ತು (STP) ಸ್ಥಾಪಿಸಲ್ಪಡದ ಬಡಾವಣೆಗಳ ಕುರಿತು ಸರ್ಕಾರದ ನಿಲುವೇನು ? (ಸಂಪೂರ್ಣ ವಿವರ ನೀಡುವುದು)

## ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬರುವ ರಸ್ತೆಗಳಲ್ಲಿ ತಗ್ಗು ಗುಂಡಿಗಳ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೫೬೧ (೬೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಬಹುತೇಕ ಎಲ್ಲಾ ರಸ್ತೆಗಳು ಹಳ್ಳ / ತಗ್ಗು ಗುಂಡಿಗಳಿಂದ ಕೂಡಿದ್ದು ದ್ವಿಚಕ್ರ/ಇತರೆ ವಾಹನ ಸವಾರರಿಗೆ ಸಂಚಾರ ಮಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಬಂದಿದ್ದಲ್ಲಿ ವಿವರ ನೀಡುವುದು)

(ಆ) ಈ ತಗ್ಗುಗುಂಡಿಗಳಿಂದ ಹಲವು ವಾಹನ ಸವಾರರು ವಾಹನ ಚಾಲನೆ ಮಾಡುವಾಗ ನಿಯಂತ್ರಣ ಕಳೆದುಕೊಂಡು ಸಾವಿಗೆ ಈಡಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಮತ್ತು ಸದರಿ ಎಷ್ಟು ಪ್ರಕರಣಗಳಲ್ಲಿ ಪರಿಹಾರ ಧನ ನೀಡಲಾಗಿದೆ ; (ವಿವರ ನೀಡುವುದು)

(ಇ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿರುವ ರಸ್ತೆಗಳಲ್ಲಿ ತಗ್ಗುಗುಂಡಿಗಳಿಲ್ಲದೆ ರಸ್ತೆಗಳನ್ನು ಸುಸ್ಥಿತಿಯಲ್ಲಿಡಲು ಪಾಲಿಕೆಯಿಂದ ತೆಗೆದುಕೊಂಡ ಕ್ರಮಗಳೇನು ; ಆಯಾ ವಾರ್ಡ್‌ನ ಅಧಿಕಾರಿಗಳಿಗೆ ರಸ್ತೆಗಳ ಸುಸ್ಥಿತಿಯ ಹೊಣೆಗಾರಿಕೆ ನೀಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ ? (ವಿವರ ನೀಡುವುದು)

## ರಾಜ್ಯ ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ತುಂಬುವ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೫೭೨ (೬೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಅಡಿಯಲ್ಲಿ ಬರುವ ಒಟ್ಟು ವಿವಿಧ ಇಲಾಖೆಗಳೆಷ್ಟು; (ವಿವರ ಒದಗಿಸುವುದು)

(ಆ) ವಿವಿಧ ಇಲಾಖೆ (cadre-wise–ಹುದ್ದೆವಾರು) ೩೧.೦೧.೨೦೨೧ರವರೆಗೆ ನಿಧನ ನಿವೃತ್ತಿ ಹಾಗೂ ರಾಜೀನಾಮೆಯಿಂದ ಖಾಲಿಯಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು, ಹುದ್ದೆಗಳವಾರು ವಿವರ ನೀಡುವುದು)

(ಇ) ವಿವಿಧ ಇಲಾಖೆಗಳಲ್ಲಿ ಈಗಾಗಲೇ ತೆರವಾಗಿರುವ ಹುದ್ದೆಗಳು ಎಷ್ಟು ; ಹುದ್ದೆಗಳನ್ನು ಮಾರ್ಚ್ – ೨೦೨೧ ರ ಒಳಗಾಗಿ ತುಂಬಿಸಿಕೊಳ್ಳಲು ನಿರ್ಧರಿಸಲಾಗಿದೆಯೇ ; (ಇಲಾಖಾವಾರು, ಹುದ್ದೆವಾರು ವಿವರವಾದ ಮಾಹಿತಿ ನೀಡುವುದು)

(ಈ) ಈಗಾಗಲೇ ಖಾಲಿ ಇರುವ ಹುದ್ದೆಗಳಲ್ಲಿ ಎಷ್ಟು ಜನರು ಗುತ್ತಿಗೆ ಅಥವಾ ಏಜೆನ್ಸಿ ಮೂಲಕ ಕಾರ್ಯನಿರ್ವಹಿಸುತ್ತಿದ್ದಾರೆ ? (ಇಲಾಖಾವಾರು, ಹುದ್ದೆವಾರು ವಿವರವಾದ ಮಾಹಿತಿ ನೀಡುವುದು)

## ರಾಜ್ಯ ಸರ್ಕಾರಿ ನೌಕರರಿಗೆ ತುಟ್ಟಿಭತ್ಯೆ ನೀಡುವ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರರ ಕ್ಷೇತ್ರ) :–**

೫೬೩ (೬೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರಿ ನೌಕರರಿಗೆ ಯಾವಾಗಿನಿಂದ ತುಟ್ಟಿಭತ್ಯೆ (D.A) ಯನ್ನು ತಡೆಹಿಡಿಯಲಾಗಿದೆಯೇ ;

(ಆ) ಲಾಕ್‌ಡೌನ್ ಮುಗಿದು ಆರ್ಥಿಕ ಪರಿಸ್ಥಿತಿ ಸುಧಾರಿಸಿರುವುದರಿಂದ ತಡೆಹಿಡಿದಿರುವ ತುಟ್ಟಿಭತ್ಯೆ (D.A) ಯನ್ನು ಬಿಡುಗಡೆ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ನೌಕರರಿಗೆ ಯಾವಾಗ ತುಟ್ಟಿಭತ್ಯೆ (D.A) ಬಿಡುಗಡೆ ಮಾಡಲಾಗುವುದು ? (ವಿವರ ನೀಡುವುದು)

## ವಿವಿಧ ಬಂದೀಖಾನೆಗಳಲ್ಲಿ ಕೋವಿಡ್ ಸೋಂಕಿನಿಂದ ಬಳಲಿದ ಖೈದಿಗಳ ಕುರಿತು

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೫೬೪ (೬೯೪) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ವಿವಿಧ ಬಂದೀಖಾನೆಗಳಲ್ಲಿ ಇಟ್ಟಿರುವ ಖೈದಿಗಳೆಷ್ಟು; ಈ ಪೈಕಿ ರಾಜಕೀಯ ಖೈದಿಗಳೆಷ್ಟು ; (ಜಿಲ್ಲಾವಾರು, ಬಂದೀಖಾನೆವಾರು ಮತ್ತು ವರ್ಗವಾರು ವಿವರಗಳನ್ನು ಒದಗಿಸುವುದು)

(ಆ) ದೇಶಾದ್ಯಂತ ಮಾರ್ಚ್, ೨೦೨೦ ರಿಂದ ವಿಧಿಸಿರುವ ಸಂಪೂರ್ಣ ಲಾಕ್‌ಡೌನ್ ಅವಧಿಯಲ್ಲಿ ಕೋವಿಡ್ ಸೋಂಕಿನಿಂದ ಬಳಲಿದ ಖೈದಿಗಳೆಷ್ಟು ಮತ್ತು ಈ ಸೋಂಕಿನಿಂದ ಸಾವನ್ನಪ್ಪಿದ ಖೈದಿಗಳೆಷ್ಟು;

(ಇ) ಸಾವನ್ನಪ್ಪಿದ ರಾಜಕೀಯ ಖೈದಿಗಳಿಗೆ ರಾಜ್ಯ ಸರ್ಕಾರದಿಂದ ಪರಿಹಾರ ನೀಡಲಾಗಿದೆಯೇ ; ಹಾಗಿದ್ದಲ್ಲಿ, ವಿವರ ನೀಡುವುದು ?

## ಶಿರಾ ತಾಲ್ಲೂಕಿನ ಬರಪೀಡಿತ ಮತ್ತು ಗಡಿನಾಡು ಪ್ರದೇಶಗಳಿಗೆ ಕುಡಿಯುವ ನೀರು ಪೂರೈಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೫೬೫ (೬೬೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ, ಶಿರಾ ತಾಲ್ಲೂಕು ಬರಪೀಡಿತ ಮತ್ತು ಗಡಿನಾಡು ಪ್ರದೇಶವಾಗಿದ್ದು, ಈ ತಾಲ್ಲೂಕಿನಲ್ಲಿ ಬರಪೀಡಿತ ಮತ್ತು ಕುಡಿಯುವ ನೀರಿನ ಅಭಾವಕ್ಕೆ ಪ್ರತಿ ವರ್ಷವೂ ಒಳಗಾಗುವ ಗ್ರಾಮಗಳಿಗೆ ಕುಡಿಯುವ ನೀರು ಒದಗಿಸಲು ಮತ್ತು ಕೆರೆ ತುಂಬಿಸುವ ಮೂಲಕ ನೀರಾವರಿ ಸೌಕರ್ಯ ಕಲ್ಪಿಸಲು ಹೇಮಾವತಿ ಜಲಾಶಯ ಯೋಜನೆ, ಭದ್ರಾ, ಮೇಲ್ದಂಡೆ ಯೋಜನೆ ಮತ್ತು ಎತ್ತಿನಹೊಳೆ ಯೋಜನೆ ಅಡಿಯಲ್ಲಿ ರಾಜ್ಯ ಸರ್ಕಾರ ಯೋಜನೆಗಳನ್ನು ರೂಪಿಸಿರುವುದು ನಿಜವೇ ; ಹಾಗಿದ್ದಲ್ಲಿ, ಸಂಪೂರ್ಣ ವಿವರ ಒದಗಿಸುವುದು ;

(ಆ) ಹೇಮಾವತಿ ಜಲಾಶಯ ಯೋಜನೆಯ ಎಡದಂಡೆ ನಾಲಾದಿಂದ ಶಿರಾ ತಾಲ್ಲೂಕಿನ ಯಾವ ಯಾವ ಗ್ರಾಮಗಳಿಗೆ ನೀರು ಪೂರೈಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಇ) ಭದ್ರಾ ಮೇಲ್ದಂಡೆ ನಾಲಾ ಯೋಜನೆ ಅಡಿಯಲ್ಲಿ ಶಿರಾ ತಾಲ್ಲೂಕಿನಲ್ಲಿ ಎಷ್ಟು ಕೆರೆಗಳು ಅಚ್ಚುಕಟ್ಟಿಗೆ ಒಳಪಡುತ್ತಿವೆ ಮತ್ತು ನೀರಾವರಿ ಒಳಪಡುವ ಕ್ಷೇತ್ರವೆಷ್ಟು ; ಎಷ್ಟು ಗ್ರಾಮಗಳಿಗೆ ಕುಡಿಯುವ ನೀರಿನ ಯೋಜನೆಯನ್ನು ಅಳವಡಿಸಲಾಗುತ್ತಿದೆ ; (ಸಂಪೂರ್ಣ ವಿವರ ನೀಡುವುದು)

(ಈ) ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆ ಅಡಿಯಲ್ಲಿ ಶಿರಾ ತಾಲ್ಲೂಕಿನಲ್ಲಿ ಕುಡಿಯುವ ನೀರನ್ನು ಪೂರೈಕೆ ಮಾಡಲು ಗುರುತಿಸಿರುವ ಗ್ರಾಮಗಳೆಷ್ಟು ; ಮತ್ತು ಕೆರೆಗಳೆಷ್ಟು ; ಈ ಯೋಜನೆಯನ್ನು ಅನುಷ್ಠಾನಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ? (ಪೂರ್ಣ ವಿವರ ನೀಡುವುದು)

## ೨೨೦ ಕೆ.ವಿ. ಮತ್ತು ಅದಕ್ಕಿಂತ ಹೆಚ್ಚಿನ ಶಕ್ತಿಯ ವಿದ್ಯುತ್ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೫೬೬ (೬೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೨೦ ಕೆ.ವಿ. ಮತ್ತು ಅದಕ್ಕಿಂತ ಹೆಚ್ಚಿನ ಶಕ್ತಿಯ ಮತ್ತು ಅಧಿಕ ಹೆಚ್ಚುವರಿ ವೋಲ್ಟೇಜ್‌ವುಳ್ಳ ಭೂಗತ ವಿದ್ಯುತ್ ಕೇಬಲ್ ವ್ಯವಸ್ಥೆಗಳು ಆಧುನಿಕ ದಿನಗಳಲ್ಲಿ ವಿದ್ಯುತ್ ಪ್ರಸರಣದ ಮೂಲಸೌಕರ್ಯದ ಬೆನ್ನೆಲಬಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅದರ ವಿವರ ಒದಗಿಸುವುದು ;

(ಇ) ಸರ್ಕಾರವು ರಾಜ್ಯದ ಯಾವುದೇ ಭಾಗದಲ್ಲಿ ಇಂತಹ ಭೂಗತ ಕೇಬಲ್ ವ್ಯವಸ್ಥೆಯನ್ನು ಅನುಷ್ಠಾನಗೊಳಿಸಲಾಗಿದೆಯೇ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಈ) ಹಾಗಿದ್ದಲ್ಲಿ, ಅದರ ವಿವರ ಒದಗಿಸುವುದು ; ಅನುಷ್ಠಾನಗೊಳಿಸದಿದ್ದಲ್ಲಿ ಕಾರಣಗಳಾವುವು ?

## ಜನ್–ಧನ್ ಯೋಜನೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :–**

೫೬೭ (೬೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಧಾನ ಮಂತ್ರಿ ಜನ್–ಧನ್ ಯೋಜನೆ (PMJDY) ಅಡಿಯಲ್ಲಿ ತೆರೆಯಲಾಗಿರುವ ಬ್ಯಾಂಕ್ ಖಾತೆಗಳೆಷ್ಟು ; ಈ ಪೈಕಿ ಎಷ್ಟು ಖಾತೆಗಳು ಚಾಲ್ತಿಯಲ್ಲಿವೆ ; (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಜ್ಯ ಸರ್ಕಾರ ಗ್ರಾಮಾಂತರ ಪ್ರದೇಶದಲ್ಲಿರುವ ರೈತಾಪಿ ಜನರು, ಪ್ರಧಾನ ಮಂತ್ರಿ ಜನ್–ಧನ್ ಯೋಜನೆಯಡಿ ಬ್ಯಾಂಕ್ ಖಾತೆ ತೆರೆದು, ಆರ್ಥಿಕ ಸಹಾಯ ಪಡೆಯಲು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಯೋಜನೆಯಡಿಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯದ ಎಷ್ಟು ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಈ ಆರ್ಥಿಕ ನೆರವು ಜಮೆಯಾಗಿದೆ ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಮುಧೋಳ ತಾಲ್ಲೂಕಿನಲ್ಲಿ ಕೃಷ್ಣ ಮೇಲ್ದಂಡೆ ಯೋಜನೆಯಿಂದ ಮುಳುಗಡೆಯಾದ ಪ್ರದೇಶಗಳು

**ಶ್ರೀ ಆರ್.ಬಿ.ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೮ (೬೪೯) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಾಗಲಕೋಟೆ ಜಿಲ್ಲೆ, ಮುಧೋಳ ತಾಲ್ಲೂಕಿನ ವ್ಯಾಪ್ತಿಯಲ್ಲಿ ಕೃಷ್ಣ ಮೇಲ್ದಂಡೆ ಯೋಜನೆಯಡಿ ಮುಳುಗಡೆಯಾದ ಗ್ರಾಮಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು / ಗ್ರಾಮವಾರು ಮಾಹಿತಿಗಳನ್ನು ಒದಗಿಸುವುದು)

(ಆ) ಈ ರೀತಿ ಮುಳುಗಡೆಯಾದ ಗ್ರಾಮಗಳಿಗೆ ಪುನರ್ವಸತಿ ಸೌಲಭ್ಯ ಕಲ್ಪಿಸಲಾಗಿದೆಯೇ; ಕಲ್ಪಿಸಿದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ಒದಗಿಸಿಕೊಡಲಾಗಿದೆ; ಇದುವರೆಗೂ ಪುನರ್ವಸತಿ ಸೌಲಭ್ಯವನ್ನು ಒದಗಿಸಿಕೊಡಲು ಸಾಧ್ಯವಾಗದ ಗ್ರಾಮಗಳಾವುವು;

(ಇ) ಈ ಸಂಬಂಧ ಸರ್ಕಾರದ ಮುಂದೆ ದೂರುಗಳಿವೆಯೇ; ಈ ದೂರುಗಳ ಪರಿಹಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಖಜಾನೆ ಇಲಾಖೆಯ ದಾಖಲೆಗಳ ಬಗ್ಗೆ

**ಶ್ರೀ ಆರ್.ಬಿ.ತಿಮ್ಮಾಪುರ (ವಿಧಾನಸಭೆಯಿಂದ ಚುನಾಯಿತರಾದವರು):–**

೫೬೯ (೬೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಖಜಾನೆ ಇಲಾಖೆಯಲ್ಲಿರುವ ದಾಖಲಾತಿಗಳನ್ನು ಸಂಗ್ರಹಿಸಿ ಸಂರಕ್ಷಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಇದಕ್ಕಾಗಿ ರೂಪಿಸಿರುವ ಕಾರ್ಯಯೋಜನೆಗಳೇನು ? (ವಿವರಗಳನ್ನು ಒದಗಿಸುವುದು)

## ಕೊಡಗು ಜಿಲ್ಲೆಯಲ್ಲಿ ಹರಿಯುವ ಕಾವೇರಿ ನದಿಯಲ್ಲಿ ಹೂಳು ತೆಗೆಯುವ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೦ (೭೦೨) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ಸುರಿದ ಧಾರಾಕಾರ ಮಳೆ ಹಾಗೂ ಭೂಕುಸಿತದಿಂದಾಗಿ ಹರಿಯುವ ಕಾವೇರಿ ನದಿಯಲ್ಲಿ ಸಾಕಷ್ಟು ಹೂಳು ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಹೂಳನ್ನು ಇದುವರೆಗೂ ತೆಗೆಯದಿರಲು ಕಾರಣಗಳೇನು ;

(ಇ) ಕೊಡಗಿನ ಪುಣ್ಯಕ್ಷೇತ್ರ ಭಾಗಮಂಡಲದ ತ್ರಿವೇಣಿ ಸಂಗಮದಲ್ಲಿ ಸಾಕಷ್ಟು ಹೂಳು ತುಂಬಿಕೊಂಡಿದ್ದು, ಕೂಡಲೇ ಇದನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲಾಗುವುದೇ?

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ ಬಿಡುಗಡೆ ಕುರಿತು

**ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೫೭೧ (೭೦೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ ಹಾಗೂ ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ, ೨೦೧೬–೧೭ ರಿಂದ ೨೦೨೦–೨೧ರವರೆಗೆ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಗೆ ಸಂಬಂಧಿಸಿದಂತೆ ಪ್ರತಿವರ್ಷಕ್ಕೆ ನಿಗದಿಯಾಗಿರುವ ರೂ.೨ ಕೋಟಿಗಳ ಅನುದಾನವನ್ನು ಎಲ್ಲಾ ಮಾನ್ಯ ಶಾಸಕರುಗಳು ಸೂಚಿಸಿರುವ ಕಾಮಗಾರಿಗಳಿಗೆ ಒದಗಿಸಲಾಗಿದೆಯೇ; (ವರ್ಷವಾರು ವಿವರ ನೀಡುವುದು)

(ಆ) ಮೇಲಿನ ಯಾವ ಆರ್ಥಿಕ ವರ್ಷಗಳಲ್ಲಿ ಕಡಿಮೆ ಅನುದಾನ ಬಿಡುಗಡೆಯಾಗಿದೆ; ಕಡಿಮೆ ಅನುದಾನ ಒದಗಿಸಿದ ಆರ್ಥಿಕ ವರ್ಷಗಳಲ್ಲಿ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಇರುವ ಅನುದಾನವನ್ನು ಬಳಸಿ ಮಾನ್ಯ ಶಾಸಕರುಗಳು ಸೂಚಿಸಿರುವ ರೂ.೨ ಕೋಟಿಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸುವಂತೆ ಆದೇಶಿಸಲಾಗಿದೆಯೇ;

(ಇ) ಆದೇಶಿಸಿದ್ದಲ್ಲಿ, ೨೦೧೮-೧೯, ೨೦೧೯-೨೦ನೇ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ಪಿ.ಡಿ. ಖಾತೆಯಲ್ಲಿ ಬಾಕಿ ಇರುವ ಅನುದಾನವನ್ನು ಬಳಸಿಕೊಂಡು ಮಾನ್ಯ ಶಾಸಕರುಗಳು ಸೂಚಿಸಿರುವ ೨ ಕೋಟಿ ಮೊತ್ತದ ಕಾಮಗಾರಿಗಳಿಗೆ ಅನುದಾನ ಒದಗಿಸಲಾಗಿದೆಯೇ ; ಸದರಿ ಸಾಲಿನಲ್ಲಿ ಜಿಲ್ಲಾಧಿಕಾರಿಗಳ ಪಿ.ಡಿ.ಖಾತೆಯಲ್ಲಿ ಬಾಕಿ ಇದ್ದ ಅನುದಾನವೆಷ್ಟು? (ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

## ಕರ್ನಾಟಕ ಲೋಕಸೇವಾ ಆಯೋಗದ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೫೭೨ (೭೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಲೋಕಸೇವಾ ಆಯೋಗವು ಸದಾ ಒಂದಿಲ್ಲೊಂದು ಹಗರಣಗಳಲ್ಲಿ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯ ಸರ್ಕಾರಕ್ಕೆ ಕರ್ನಾಟಕ ಲೋಕಸೇವಾ ಆಯೋಗದ ಮೇಲೆ ಇರುವ ನಿಯಂತ್ರಣಗಳೇನು;

(ಇ) ಕರ್ನಾಟಕ ಲೋಕಸೇವಾ ಆಯೋಗವು ಕಳಂಕರಹಿತವಾಗಿ ನಡೆಯುವಂತಾಗಲು ಸರ್ಕಾರ ಕೈಗೊಳ್ಳಬಹುದಾದ ಕ್ರಮಗಳೇನು?

## ಕ್ರೀಡಾ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಬಗ್ಗೆ

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :-**

೫೭೩ (೭೭೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡೆ, ಯೋಜನಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಕ್ರೀಡಾ ಚಟುವಟಿಕೆಗಳಿಗೆ ಒತ್ತು ನೀಡುವ ದೃಷ್ಠಿಯಿಂದ ಹಮ್ಮಿಕೊಂಡಿರುವ ಕಾರ್ಯಕ್ರಮಗಳಾವುವು;

(ಆ) ರಾಜ್ಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಕ್ರೀಡಾಪಟುಗಳನ್ನು ತಯಾರು ಮಾಡುವಲ್ಲಿ ರಾಜ್ಯದ ಪಾತ್ರವೇನು ಹಾಗೂ ಯಾವ ಸ್ಥಾನದಲ್ಲಿದೆ; ಇದಕ್ಕಾಗಿ ಇರುವ ಮೂಲಸೌಲಭ್ಯಗಳೇನು?

## ಕೇಂದ್ರದ ಅನುದಾನದ ಕುರಿತು

**ಶ್ರೀ ಯು.ಬಿ.ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು):–**

೫೭೪ (೭೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಕೇಂದ್ರದಿಂದ ರಾಜ್ಯಕ್ಕೆ ಬಿಡುಗಡೆಯಾಗಬೇಕಾಗಿದ್ದ ಅನುದಾನವೆಷ್ಟು; ಕೊರತೆ ಎಷ್ಟು;

(ಆ) ಅನುದಾನ ಬಿಡುಗಡೆಯಾಗದಿರಲು ಕಾರಣಗಳೇನು ಮತ್ತು ಅನುದಾನ ಬಿಡುಗಡೆ ಕೋರಿ ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಪತ್ರ ವ್ಯವಹಾರಗಳ ಮಾಹಿತಿ ನೀಡುವುದು)

(ಇ) ಅನುದಾನ ಬಿಡುಗಡೆ ಸಲುವಾಗಿ ಎಷ್ಟು ಬಾರಿ ರಾಜ್ಯದ ನಿಯೋಗ ಕೇಂದ್ರವನ್ನು ಭೇಟಿ ಮಾಡಿ ಒತ್ತಡವನ್ನು ತಂದಿದೆ, ಇದರ ಪರಿಣಾಮಗಳೇನು ?

## ಹೇಮಾವತಿ ನಾಲಾ ವಿಭಾಗದಲ್ಲಿ ನಡೆಯುತ್ತಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೫ (೬೮೧) ಮಾನ್ಯ ಜಲಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಮಂಡ್ಯ ಜಿಲ್ಲೆ ನಾಗಮಂಗಲ ತಾಲ್ಲೂಕು ನಂ–೭ ಕಾರ್ಯಪಾಲಕ ಅಭಿಯಂತರರು, ಹೇಮಾವತಿ ನಾಲಾ ವಿಭಾಗದಲ್ಲಿ ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಅಡಿ ಮಂಜೂರಾಗಿರುವ ಕಾಮಗಾರಿಗಳಾವುವು; ಸದರಿ ಕಾಮಗಾರಿಗಳು ಯಾವ ಹಂತದಲ್ಲಿದೆ; (ವಿವರ ನೀಡುವುದು)

(ಆ) ಕಾಮಗಾರಿ ಪೂರೈಸಿ ವರ್ಷಗಳು ಕಳೆದರೂ ಸಂಬಂಧಪಟ್ಟ ಗುತ್ತಿಗೆದಾರರಿಗೆ ಇಲ್ಲಿಯವರೆವಿಗೂ ಬಿಲ್ಲು ಪಾವತಿ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ'; (ವಿವರ ನೀಡುವುದು)

(ಇ) ಎಸ್.ಸಿ.ಪಿ ಮತ್ತು ಟಿ.ಎಸ್.ಪಿ ಅಡಿ ಈವರೆಗೆ ನಂ–೭ ಕಾರ್ಯಪಾಲಕ ಅಭಿಯಂತರರ ಕಛೇರಿಗೆ ಬಿಡುಗಡೆಯಾಗಿರುವ ಎಲ್.ಓ.ಸಿ. ಮೊತ್ತವೆಷ್ಟು; (ವಿವರ ನೀಡುವುದು)

(ಈ) ಕಾಮಗಾರಿ ಪೂರೈಸಿರುವ ಆದ್ಯತಾ ಪಟ್ಟಿ (ಸೀನಿಯರ್ ಪಟ್ಟಿ) ತಯಾರಿಸಲಾಗಿದೆಯೇ; ಹಾಗೂ ಕಳೆದ ಮೂರು ವರ್ಷಗಳಲ್ಲಿ ಆದ್ಯತಾ ಪಟ್ಟಿವಾರು ಬಿಲ್ಲು ಪಾವತಿ ಮಾಡಿರುವುದು ಎಷ್ಟು? (ವಿವರ ನೀಡುವುದು)

## ವಾಣಿಜ್ಯ ಮಳಿಗೆ / ಅಂಗಡಿ ಮುಂಗಟ್ಟುಗಳ ಬಗ್ಗೆ

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೬ (೬೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಒಡೆತನದಲ್ಲಿರುವ ವಾಣಿಜ್ಯ ಮಳಿಗೆ/ಅಂಗಡಿ ಮುಂಗಟ್ಟುಗಳ ಸಂಖ್ಯೆ ಎಷ್ಟು; ಪ್ರತಿ

ಮಳಿಗೆ/ಅಂಗಡಿಯ ಅಳತೆ ಎಷ್ಟು; ಅವು ಇರುವ ಪ್ರದೇಶ ಯಾವುವು; ಯಾರಿಗೆ ಯಾವ ಅವಧಿಗೆ ಲೀಸ್ ನೀಡಲಾಗಿದೆ; ಲೀಸ್ ಮುಗಿದಿದ್ದಲ್ಲಿ ಲೀಸ್ ಅವಧಿಯನ್ನು ಮುಂದುವರೆಸ–ಲಾಗಿದೆಯೇ; ಇಲ್ಲವಾದಲ್ಲಿ ಖಾಲಿ ಮಾಡಿಸಲು ಪಾಲಿಕೆ ಕೈಗೊಂಡಿರುವ ಕ್ರಮಗಳೇನು; (ಪ್ರತಿ ಮಳಿಗೆ, ಅಂಗಡಿವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಯಾವ ಆಧಾರದ ಮೇಲೆ ಲೀಸ್ ನೀಡಲಾಗಿದೆ; ಹಾಗೂ ದರವನ್ನು ನಿಗಧಿಪಡಿಸುವಾಗ ಅನುಸರಿಸಿದ ಮಾನದಂಡಗಳೇನು; ಲೀಸ್ ಅವಧಿ ಮುಗಿದಿರುವ ಮಳಿಗೆ. ಅಂಗಡಿಗಳು ಯಾವುವು ? (ವಿಳಾಸದೊಂದಿಗೆ ಸಂಪೂರ್ಣ ವಿವರ ನೀಡುವುದು)

## ಕಸ ವಿಲೇವಾರಿ ಕುರಿತು

**ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೭ (೬೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಸವನ್ನು ವಿಲೇವಾರಿ ಮಾಡಲು ಎಂದಿನಿಂದ ಗುತ್ತಿಗೆಯನ್ನು ನೀಡಲಾಗಿದೆ; ಗುತ್ತಿಗೆಯ ಅವಧಿಯ ಮುಗಿದಿದೆಯೇ; ಅದೇ ಗುತ್ತಿಗೆದಾರರನ್ನು ಮುಂದುವರೆಸಲು ನಿಯಮಗಳಲ್ಲಿ ಅವಕಾಶವಿದೆಯೇ; ಇಲ್ಲವಾದಲ್ಲಿ ನಿಯಮ ಉಲ್ಲಂಘಿಸಿರುವ ಅಧಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ;

(ಆ) ದಿನಾಂಕ : ೦೧-೦೧-೨೦೧೮ ರಿಂದ ೩೦-೧೧-೨೦೨೦ರ ವರೆಗೆ ಕಸ ಸಂಗ್ರಹಣಾ ಕೇಂದ್ರಕ್ಕೆ ಪ್ರತಿ ದಿನ ಯಾವ ವಾಹನದಲ್ಲಿ ಎಷ್ಟು ಟನ್ ಕಸವು ಬಂದಿದೆ; ತೂಕವನ್ನು ಪರಿಶೀಲಿಸಲಾಗಿದೆಯೇ; (ದಿನಾಂಕ, ಪ್ರತಿ ವಾಹನದ ತೂಕದ ರಸೀದಿ ವಿವರ, ವಾಹನದ ಮಾದರಿ, ವಾಹನಗಳ ಸಂಖ್ಯೆ, ತೂಕ ಪರಿಶೀಲಿಸಿದ ಸಿಬ್ಬಂದಿಯ ಹೆಸರು, ದಿನಾಂಕವಾರು ಸಂಪೂರ್ಣ ವಿವರ ನೀಡುವುದು)

(ಇ) ಕಸ ಸಂಗ್ರಹಣಾ ಕೇಂದ್ರದಲ್ಲಿರುವ ವೇ-ಬ್ರಿಡ್ಜ್‌ನ ನಿರ್ವಹಣೆಯನ್ನು ಪಾಲಿಕೆ ನಿರ್ವಹಿಸುತ್ತಿದೆಯೇ; ಅಥವಾ ಗುತ್ತಿಗೆದಾರರು ನಿರ್ವಹಿಸುತ್ತಾರೆಯೇ; ಇದು ಪ್ರತಿ ವರ್ಷ ತೂಕ ಮತ್ತು ಅಳತೆ ಇಲಾಖೆಯ ತಪಾಸಣೆಗೆ ಒಳಪಟ್ಟಿದೆಯೇ; (ವಿವರಗಳನ್ನು ಒದಗಿಸುವುದು)

(ಈ) ಕಸ ಸಂಗ್ರಹಣೆ ಹಾಗೂ ವಿಲೇವಾರಿ ಸರಿಯಾದ ರೀತಿಯಲ್ಲಿ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು?

## ಕೆರೆಗಳ ಹೂಳು ತೆಗೆಯುವ ಕಾಮಗಾರಿಯ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೭೮ (೬೭೮) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಿಂದ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ನಾಗಮಂಗಲ ತಾಲ್ಲೂಕಿಗೆ ಯಾವ ಯಾವ ಯೋಜನೆಯಲ್ಲಿ ಎಷ್ಟೆಷ್ಟು ಅನುದಾನ ಮಂಜೂರು ಮಾಡಲಾಗಿದೆ; (ಕಾಮಗಾರಿವಾರು ಅನುದಾನದ ಸಂಪೂರ್ಣ ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ವ್ಯಾಪ್ತಿಯಲ್ಲಿ ಬರುವ ಕೆರೆಗಳ ಹೂಳು ತೆಗೆಯುವ ಹಾಗೂ ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗೆ ಅನುದಾನ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ ; ಅನುದಾನ ಮಂಜೂರು ಮಾಡುವುದು ಯಾವಾಗ; ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು ? (ಸಂಪೂರ್ಣ ವಿವರ ನೀಡುವುದು)

## ಅನುದಾನ ಬಿಡುಗಡೆಯಾಗಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭೯ (೫೯೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೧೮–೧೯ ಮತ್ತು ೨೦೧೯–೨೦೨೦ನೇ ಸಾಲಿನಲ್ಲಿ ಸರ್ಕಾರವು ಕಲಬುರಗಿ ಜಿಲ್ಲೆ, ಆಳಂದ ತಾಲ್ಲೂಕಿಗೆ ಯಾವ ಯಾವ ಇಲಾಖೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ; (ಇಲಾಖಾವಾರು ವಿವರ ನೀಡುವುದು)

(ಆ) ಅನುದಾನ ಬಿಡುಗಡೆ ಮಾಡಿದ್ದಲ್ಲಿ ಯಾವ ಯಾವ ಇಲಾಖೆಗಳ ಎಷ್ಟೆಷ್ಟು ಕಾಮಗಾರಿಗಳು ಪೂರ್ತಿಗೊಂಡಿವೆ ಹಾಗೂ ಎಷ್ಟು ಬಾಕಿ ಉಳಿದಿವೆ ? (ವಿವರ ನೀಡುವುದು)

## ರೈಲ್ವೆ ಸ್ಲೀಪರ್ ಕ್ಲಾಸ್‌ನಲ್ಲಿ ಕಳ್ಳತನವಾಗುತ್ತಿರುವ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೦ (೫೯೩) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಲ್ಲಿ ವಾಡಿಯಿಂದ ರಾಯಚೂರಿಗೆ ಹೊರಡುವ ರೈಲಿನಲ್ಲಿ ರಾತ್ರಿ ವೇಳೆಯಲ್ಲಿ ಸ್ಲೀಪರ್ ಕ್ಲಾಸ್‌ನಲ್ಲಿ ಕಳ್ಳತನವಾಗು–ತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು;

(ಆ) ಕಳೆದ ೩ ವರ್ಷಗಳಲ್ಲಿ ಕಳ್ಳತನವಾದ ಪ್ರಕರಣಗಳ ಸಂಖ್ಯೆ ಎಷ್ಟು; ಇಲ್ಲಿಯುವರೆಗೆ ಎಷ್ಟು ಪ್ರಕರಣಗಳಲ್ಲಿ ಹಣ/ಬಂಗಾರ ಕಳೆದುಕೊಂಡವರಿಗೆ ಪರಿಹಾರ ಒದಗಿಸಲಾಗಿದೆ? (ವಿವರ ಒದಗಿಸುವುದು)

## ರಸ್ತೆಗಳ ಅಭಿವೃದ್ಧಿ ಕುರಿತು

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೧ (೫೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಬ್ಬಿಗೆರೆಹಳ್ಳಿ ಶೆಟ್ಟಿ ಹಳ್ಳಿ ವಾರ್ಡ್ ನಂ.೧೨, ದಾಸರಹಳ್ಳಿ ನಗರಸಭಾ, ಬೆಂಗಳೂರು ಇಲ್ಲಿನ ರಸ್ತೆಗಳು ಅಭಿವೃದ್ಧಿಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ರಸ್ತೆಗಳು ಅಭಿವೃದ್ಧಿಯಾಗದೆ ಅಲ್ಲಿನ ಜನ ಸಾಮಾನ್ಯರಿಗೆ ಮತ್ತು ವಾಹನ ಸವಾರರಿಗೆ ಓಡಾಡಲು ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಆ ರಸ್ತೆಗಳು ಅಭಿವೃದ್ಧಿಯಾಗದಿರುವುದಕ್ಕೆ ಕಾರಣವೇನು; (ವಿವರ ನೀಡುವುದು)

(ಈ) ರಸ್ತೆಗಳನ್ನು ಅಭಿವೃದ್ಧಿಪಡಿಸುವ ಯೋಜನೆ ಸರ್ಕಾರ ಮುಂದಿದೆಯೇ; ಹಾಗಿದ್ದಲ್ಲಿ, ಯಾವಾಗ ರಸ್ತೆಗಳನ್ನು ಅಭಿವೃದ್ಧಿಪಡಿಸಲಾಗುವುದು? (ಮಾಹಿತಿ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಕೆರೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೭ (೬೬೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯಡಿಯಲ್ಲಿ ಬರುವ ಕೆರೆಗಳ ಸಂಖ್ಯೆ ಎಷ್ಟು;

(ಆ) ಕಳೆದ ೫ ವರ್ಷಗಳ ಅವಧಿಯಲ್ಲಿ ಕೆರೆಗಳ ಪುನಶ್ಚೇತನ ಅಭಿವೃದ್ಧಿಗಾಗಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಒದಗಿಸಿರುವ ಅನುದಾನ ಎಷ್ಟು; (ವಿವರ ನೀಡುವುದು)

(ಇ) ಈ ನಿಟ್ಟಿನಲ್ಲಿ ಅಭಿವೃದ್ಧಿಪಡಿಸಲಾಗಿರುವ ಕೆರೆಗಳು ಯಾವುವು ? (ವಿವರ ನೀಡುವುದು)

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯ ಕಾರ್ಯಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೩ (೬೬೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ಸಣ್ಣ ನೀರಾವರಿ ಇಲಾಖೆಯು ಮೂಲಕ ಅನುಷ್ಠಾನಗೊಳಿಸುತ್ತಿರುವ ಕಾರ್ಯಕ್ರಮಗಳಾವುವು ;

(ಆ) ಸದರಿ ಕಾರ್ಯಕ್ರಮುಗಳಿಗೆ ನಿಗದಿ ಮಾಡಿರುವ ಮತ್ತು ಬಿಡುಗಡೆಯಾಗಿರುವ ಅನುದಾನ ಹಾಗೂ ಖರ್ಚಾಗಿರುವ ಅನುದಾನ ಎಷ್ಟು ;

(ಇ) ಕಾರ್ಯಕ್ರಮಗಳ ಅನುಷ್ಠಾನ ಸಮರ್ಪಕವಾಗಿ ಆಗುತ್ತಿದೆಯೇ ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಯಾಲಯಗಳ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೪ (೬೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲ್ಯಾಣ ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ/ಅರೇ ಸರ್ಕಾರಿ ಕಾರ್ಯಾಲಯಗಳು ಯಾವುವು ; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಆ) ಕಲ್ಯಾಣ ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಕಳೆದ ಎರಡು ವರ್ಷದಿಂದ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಇಲಾಖಾವಾರು, ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ೨೦೧೮ ರಿಂದ ೨೦೨೦ನೇ ಸಾಲಿನಿಂದ ಕಲ್ಯಾಣ ಕರ್ನಾಟಕ ಭಾಗದ ೬ ಜಿಲ್ಲೆಗಳಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿದ ಹುದ್ದೆಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು, ಇಲಾಖಾವಾರು ಸ್ಪಷ್ಟ ಮಾಹಿತಿ ನೀಡುವುದು)

## ವಿಧಾನಸಭಾ ಕ್ಷೇತ್ರಗಳಿಗೆ ಬಿಡುಗಡೆಯಾದ ಅನುದಾನದ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೫ (೬೭೭) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಬೀದರ್ ಜಿಲ್ಲೆಗಳ ವಿಧಾನಸಭಾ ಕ್ಷೇತ್ರಗಳ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; (ವರ್ಷವಾರು, ಕಾಮಗಾರಿವಾರು, ಕ್ಷೇತ್ರವಾರು ಮಾಹಿತಿ ನೀಡುವುದು)

(ಆ) ವಿಧಾನಸಭಾ ಕ್ಷೇತ್ರಗಳಲ್ಲಿ ಯಾವ ಯಾವ ಯೋಜನೆಯಡಿ ಯಾವ ಯಾವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದೆ ; ಮತ್ತು ಯಾವ ಕಾಮಗಾರಿಗಳಿಗೆ ಎಷ್ಟು ಅನುದಾನವನ್ನು ನೀಡಲಾಗಿದೇ ; (ಕ್ಷೇತ್ರವಾರು ವಿವರ ನೀಡುವುದು)

(ಇ) ಕೈಗೆತ್ತಿಕೊಂಡ ಕಾಮಗಾರಿಗಳನ್ನು ಯಾವ ಯಾವ ಸಂಸ್ಥೆಗಳಿಗೆ ಅಥವಾ ವ್ಯಕ್ತಿಗಳಿಗೆ ಗುತ್ತಿಗೆ ನೀಡಲಾಗಿದೆ ; ಸದರಿ ಕಾಮಗಾರಿಗಳು ಯಾವ ಹಂತದಲ್ಲಿವೇ ; (ವಿವರ ನೀಡುವುದು)

(ಈ) ಗುತ್ತಿಗೆದಾರರು ಕಾಮಗಾರಿಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿದ್ದಾರೆಯೇ ; ಕಾಮಗಾರಿಗಳ ಗುಣಮಟ್ಟವನ್ನು ಪರೀಕ್ಷಿಸಲಾಗಿದೆಯೇ ; ಅವುಗಳಿಗೆ ಸಂಬಂಧಿಸಿದಂತೆ ಯಾವುದಾದರು ದೂರುಗಳು ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಕೈಗೊಂಡ ಕ್ರಮಗಳೇನು ?

## ಬೀದರ್ ನಗರದಲ್ಲಿರುವ ಕೇಂದ್ರ ಕಾರಾಗೃಹವನ್ನು ಹೊರ ಪ್ರದೇಶಕ್ಕೆ ಸ್ಥಳಾಂತರಿಸುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೮೬ (೬೭೬) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ ಜಿಲ್ಲೆಯಲ್ಲಿ ನೂತನವಾಗಿ ಸಂಚಾರಿ ಪೊಲೀಸ್ ಠಾಣೆಗಳನ್ನು (Traffic Police Station) ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಬೀದರ ನಗರದಲ್ಲಿ ಪ್ರಸ್ತುತ ಇರುವ ಜಿಲ್ಲಾ ಕೇಂದ್ರ ಕಾರಾಗೃಹವನ್ನು ನಗರದ ಹೊರ ಪ್ರದೇಶಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಬೀದರ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಮಹತ್ವದ ಕ್ರಮಗಳೇನು ? (ಮಾಹಿತಿ ನೀಡುವುದು)

## ಎನ್.ಪಿ.ಎಸ್. ಪಿಂಚಣಿಯ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೫೮೭ (೬೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಎನ್.ಪಿ.ಎಸ್. ಪಿಂಚಣಿ ವ್ಯವಸ್ಥೆಗೆ ಒಳ ಪಟ್ಟಿರುವ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ;

(ಆ) ಎನ್.ಪಿ.ಎಸ್. ನ ಸಾಧಕ–ಭಾದಕಗಳ ಪರಿಶೀಲನೆಗೆ ಸಮಿತಿಯನ್ನು ಯಾವಾಗ ರಚಿಸಲಾಯಿತು ;

(ಇ) ಈ ಸಮಿತಿಗೆ ಸರ್ಕಾರ ನಿಗದಿ ಪಡಿಸಿದ ಕಾಲಮಿತಿ ಎಷ್ಟು ; ಹಾಗೂ ಈ ಸಮಿತಿಯು ಎಷ್ಟು ಸಭೆಗಳನ್ನು ನಡೆಸಿದೆ ;

(ಈ) ಈ ಸಮಿತಿ ಸರ್ಕಾರಕ್ಕೆ ವರದಿ ನೀಡಿದೆಯೇ ; ಶೀಘ್ರವಾಗಿ ವರದಿ ಸಲ್ಲಿಸಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಉ) ಎನ್.ಪಿ.ಎಸ್. ರದ್ದು ಪಡಿಸಿ ಹಳೆ ಪಿಂಚಣಿ ಯೋಜನೆ ಜಾರಿಯಾಗುವ ಬಗ್ಗೆ ಸರ್ಕಾರದ ನಿಲುವೇನು ?

## ೧೯೯೫ರ ನಂತರದ ಶಾಲಾ–ಕಾಲೇಜುಗಳಿಗೆ ಹಣಕಾಸು ಇಲಾಖೆ ಅನುದಾನ ನೀಡುವ ಬಗ್ಗೆ.

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೫೮೮ (೬೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ರ ಪ್ರಯುಕ್ತ ಎಲ್ಲಾ ನೇಮಕಾತಿಗಳಿಗೂ ಆರ್ಥಿಕ ಮಿತವ್ಯಯ ಹೇರಿರುವುದು ನಿಜವೇ ; ಹಾಗಿದ್ದಲ್ಲಿ, ಈ ಆದೇಶವನ್ನು ಯಾವಾಗ ಹಿಂಪಡೆಯಲಾಗುವುದು ;

(ಆ) ಆರ್ಥಿಕ ಇಲಾಖೆಯು ರಾಜ್ಯದಲ್ಲಿ ೧೯೯೫ರ ನಂತರ ಪ್ರಾರಂಭವಾದ ಎಲ್ಲಾ ವರ್ಗದ ಅರ್ಹ ಶಾಶ್ವತ ಅನುದಾನ ರಹಿತ ಶಾಲಾ ಕಾಲೇಜುಗಳಿಗೆ ಅನುದಾನ ನೀಡಲು ಇರುವ ತೊಂದರೆಗಳೇನು; (ವಿವರವಾದ ಮಾಹಿತಿ ನೀಡುವುದು)

(ಇ) ಯಾವ ಕಾಲಮಿತಿಯೊಳಗೆ ಸರ್ಕಾರ ಈ ಶಾಲಾ–ಕಾಲೇಜುಗಳಿಗೆ ಅನುದಾನ ನೀಡುವುದು ? (ವಿವರವಾದ ಮಾಹಿತಿ ನೀಡುವುದು)

## ಉಮ್ಮತ್ತೂರು ದೊಡ್ಡಕೆರೆಗೆ ನೀರು ತುಂಬಿಸುವ ಕುರಿತು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮೯ (೬೦೦) ಮಾನ್ಯ ಜಲ ಸಂಪನ್ಮೂಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಮ್ಮತ್ತೂರು ದೊಡ್ಡಕೆರೆಗೆ ನದಿ ಮೂಲದಿಂದ ನೀರು ತುಂಬಿಸುವ ಕಾಮಗಾರಿ ಯಾವಾಗ ಆರಂಭವಾಯಿತು ; ಈ ಯೋಜನೆಯ ಅಂದಾಜು ವೆಚ್ಚ ಎಷ್ಟು ; ಇದುವರೆಗೆ ಎಷ್ಟು ಕಾಮಗಾರಿ ಮುಕ್ತಾಯವಾಗಿದೆ ; ಉಳಿದಿರುವ ಕಾಮಗಾರಿಯನ್ನು ಯಾವಾಗ ಮುಗಿಸಲಾಗುವುದು ; ಕೆರೆಗೆ ಎಂದಿನಿಂದ ನೀರು ಹರಿಸಿ ತುಂಬಿಸಲಾಗುವುದು ;

(ಆ) ಕೆರೆಗೆ ನೀರು ಹರಿಸುವ ಮುನ್ನ ಕೆರೆಯ ಹೂಳು ತೆಗೆದು ಏರಿ ಮತ್ತು ಕೋಡಿಗಳನ್ನು ದುರಸ್ಥಿ ಮಾಡಿ ಭದ್ರಪಡಿಸಲು ಕ್ರಮ ಕೈಗೊಳ್ಳಲಾಗಿದೆಯೇ ?

## ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಅಕ್ರಮ ಚಟುವಟಿಕೆಗಳು ನಡೆಯುತ್ತಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯೦ (೫೯೯) ಮಾನ್ಯ ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು ಹಾಗೂ ಶಾಸನ ರಚನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಡಕೊಳ ಕೈಗಾರಿಕಾ ಪ್ರದೇಶದಲ್ಲಿ ಸೂಕ್ತ ಭದ್ರತೆ, ಗಸ್ತು ಇಲ್ಲದೇ ಅಕ್ರಮ ಚಟುವಟಿಕೆಗಳು ಕುಡುಕರ ಹಾವಳಿಯಿಂದ ಸಾರ್ವಜನಿಕರಿಗೆ, ಕೆಲಸಗಾರರಿಗೆ ಭಯಗ್ರಸ್ಥ ವಾತಾವರಣ ಉಂಟಾಗಿ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಪ್ರದೇಶದಲ್ಲಿ ಒಂದು ಪೊಲೀಸ್ ಔಟ್ ಪೋಸ್ಟ್ ಸ್ಥಾಪಿಸಿ, ಪೊಲೀಸ್ ಗಸ್ತು ಹೆಚ್ಚಿಸಿ ಅಕ್ರಮ ಚಟುವಟಿಕೆಗಳನ್ನು ತಡೆಗಟ್ಟಲು ಸರ್ಕಾರ ಕ್ರಮ ತೆಗೆದುಕೊಳ್ಳಲಾಗುವುದೇ ?

**ಕೆ. ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 0–152/500 ಪ್ರತಿಗಳು/01-03-2021